ಲಿಖಿತ ಮೂಲಕ
ಉತ್ತರಿಸುವ ಪ್ರಶ್ನೆಗಳ ಪಟ್ಟಿ

ಒಟ್ಟು ಪ್ರಶ್ನೆಗಳು – ೮೦

**ಪಟ್ಟಿ – ೦೧**

# ಕರ್ನಾಟಕ ವಿಧಾನ ಪರಿಷತ್ತು

## ನೂರ ಮೂವತ್ತ ನಾಲ್ಕನೇ ಅಧಿವೇಶನ

## ಮಂಗಳವಾರ, ದಿನಾಂಕ : ೦೬ನೇ ಫೆಬ್ರವರಿ, ೨೦೧೮

---

### ಸಮೂಹ – II

೧. ಇಂಧನ ಸಚಿವರು.

೨. ಕೃಷಿ ಸಚಿವರು.

೩. ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು.

೪. ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು.

೫. ಸಹಕಾರ ಸಚಿವರು.

೬. ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು.

೭. ಜವಳಿ ಹಾಗೂ ಮುಜರಾಯಿ ಸಚಿವರು.

---

## ಬೀದರ್ ಜಿಲ್ಲೆಯ ಪಶುಸಂಗೋಪನೆ ಹಾಗೂ ಕಲಬುರಗಿ (ತಾ) ಮಹಾಗಾಂವ ಹೈನುಗಾರಿಕೆ ಮಹಾವಿದ್ಯಾಲಯದಲ್ಲಿ ಮೀಸಲಾತಿಯ ಬಗ್ಗೆ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ) :–**

೧ (೮೯) ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೀದರ್ ಜಿಲ್ಲೆಯ ಪಶುಸಂಗೋಪನೆ ಮತ್ತು ಮೀನುಗಾರಿಕೆ ವಿಶ್ವವಿದ್ಯಾಲಯ ಹಾಗೂ ಕಲಬುರಗಿ ತಾಲ್ಲೂಕಿನ ಮಹಾಗಾಂವ ಹೈನುಗಾರಿಕೆ ಮಹಾವಿದ್ಯಾಲಯದಲ್ಲಿ ಮಂಜೂರಾದ, ಕಾರ್ಯನಿರ್ವಹಿಸುತ್ತಿರುವ ಹಾಗೂ ಖಾಲಿ ಇರುವ ಹುದ್ದೆಗಳು ಎಷ್ಟು; (ಹುದ್ದೆವಾರು, ವೃಂದವಾರು ಮಾಹಿತಿ ನೀಡುವುದು)

(ಆ) ಮೇಲ್ಕಂಡ ಎರಡು ಸಂಸ್ಥೆಗಳಲ್ಲಿ ಸಂವಿಧಾನದ ಕಲಂ ೩೭೧(ಜೆ) ಅಡಿಯಲ್ಲಿ ಹುದ್ದೆಗಳಲ್ಲಿ ಮೀಸಲಾತಿ ಕಲ್ಪಿಸಲಾಗಿದೆಯೇ; ಹಾಗಿದ್ದಲ್ಲಿ, ಹುದ್ದೆವಾರು ಮಾಹಿತಿ ನೀಡುವುದು;

(ಇ) ಇಲ್ಲಿಯವರೆಗೆ ಸದರಿ ಎರಡು ಸಂಸ್ಥೆಗಳಲ್ಲಿ ಸಂವಿಧಾನದ ಕಲಂ ೩೭೧(ಜೆ) ಅಡಿಯಲ್ಲಿ ನೇಮಕಾತಿ ಪ್ರಕ್ರಿಯೆ ಕೈಗೊಳ್ಳಲಾಗಿದೆಯೇ; ಕೈಗೊಂಡಿದ್ದಲ್ಲಿ, ನೇಮಕಾತಿ ಆದೇಶ ನೀಡಿದ ಸಂಖ್ಯೆ ಎಷ್ಟು? (ಹುದ್ದೆವಾರು ಮಾಹಿತಿ ನೀಡುವುದು)

## ೩೭೧(ಜೆ) ಪ್ರಕಾರ ಹೈದರಾಬಾದ್–ಕರ್ನಾಟಕ ಭಾಗದವರಿಗೆ ಜೆಸ್ಕಾಂ, ಬೆಸ್ಕಾಂ, ಕೆ.ಪಿ.ಟಿ.ಸಿ.ಎಲ್‌ನಲ್ಲಿ ನೇಮಕಾತಿ ಮತ್ತು ಬಡ್ತಿಗಳಲ್ಲಿ ಮೀಸಲಾತಿಯ ಬಗ್ಗೆ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ) :–**

೨ (೦೮) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸಂವಿಧಾನದ ಕಲಂ ೩೭೧(ಜೆ) ಪ್ರಕಾರ ಇಂಧನ ಇಲಾಖೆ ಅಡಿಯ ಜೆಸ್ಕಾಂ, ಬೆಸ್ಕಾಂ, ಕೆ.ಪಿ.ಟಿ.ಸಿ.ಎಲ್. ನಲ್ಲಿ ಹೈದರಾಬಾದ್ – ಕರ್ನಾಟಕ ಭಾಗದವರಿಗೆ ನೇಮಕಾತಿ ಹಾಗೂ ಬಡ್ತಿಗಳಲ್ಲಿ ಮೀಸಲಾತಿ ಕಲ್ಪಿಸಲಾಗಿದೆಯೇ; ಇದ್ದರೆ ನೇಮಕಾತಿಗಾಗಿ ಹಾಗೂ ಬಡ್ತಿಗಳಿಗಾಗಿ ಮೀಸಲಿರಿಸಿದ ಹುದ್ದೆಗಳ ಸಂಖ್ಯೆ ಎಷ್ಟು; (ಹುದ್ದೆವಾರು, ವೃಂದವಾರು ಸಂಪೂರ್ಣ ಮಾಹಿತಿ ನೀಡುವುದು)

(ಆ) ಕರ್ನಾಟಕ ವಿದ್ಯುತ್ ಪ್ರಸರಣ ನಿಗಮದಲ್ಲಿ ಕಾರ್ಯನಿರ್ವಹಿಸುತ್ತಿರುವ ಕಿರಿಯ ಇಂಜಿನಿಯರ್ (ವಿದ್ಯುತ್)/(ಕಾಮಗಾರಿ) ಪದವೃಂದ ಹುದ್ದೆಯಿಂದ ಸಹಾಯಕ ಇಂಜಿನಿಯರ್ (ವಿದ್ಯುತ್) / (ಕಾಮಗಾರಿ) ಪದವೃಂದದ ಹುದ್ದೆಗಳಿಗೆ ಇತ್ತೀಚೆಗೆ ಬಡ್ತಿ ನೀಡಲಾಗಿರುವ ವಿಷಯು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಜೇಷ್ಠತಾ ಪಟ್ಟಿ ತಯಾರಿಸಿ ೩೭೧(ಜೆ) ಅಡಿಯಲ್ಲಿ ಹೈದ್ರಾಬಾದ್–ಕರ್ನಾಟಕ ಭಾಗದ ಹುದ್ದೆಗಳಿಗೆ ಬಡ್ತಿ ನೀಡಲಾಗಿದೆಯೇ; (ಹುದ್ದೆವಾರು, ವೃಂದವಾರು ಸಂಪೂರ್ಣ ಮಾಹಿತಿ ನೀಡುವುದು)

(ಇ) ಕರ್ನಾಟಕ ವಿದ್ಯುತ್ ಪ್ರಸರಣ ನಿಗಮವು ಜೆಸ್ಕಾಂ, ಬೆಸ್ಕಾಂಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ನೌಕರರ ಸಂಪೂರ್ಣ ನಿಯಂತ್ರಣ ಮಾಡುತ್ತಿದ್ದು, ಹೈದ್ರಾಬಾದ್-ಕರ್ನಾಟಕ ಮೀಸಲಾತಿಯ ವಿಚಾರವಾಗಿ ಕರ್ನಾಟಕ ವಿದ್ಯುತ್ ಪ್ರಸರಣ ನಿಗಮದಲ್ಲಿ ವಿದ್ಯುತ್ ಸರಬರಾಜು ಕಂಪನಿಗಳಾದ ಜೆಸ್ಕಾಂ ಮತ್ತು ಬೆಸ್ಕಾಂಗಳಲ್ಲಿನ ಹುದ್ದೆಗಳನ್ನು ಪರಿಗಣಿಸದೇ ಅಧಿಸೂಚಿಸಿ ೩೭೧(ಜೆ) ಮೀಸಲಾತಿಯಿಂದ ಹೊರತುಪಡಿಸಲು ಕಾರಣವೇನು; (ಕಾರಣಗಳೊಂದಿಗೆ ವಿವರ ನೀಡುವುದು)

(ಈ) ಜೆಸ್ಕಾಂ, ಬೆಸ್ಕಾಂನಲ್ಲಿ ಕಾರ್ಯನಿರ್ವಹಿಸುತ್ತಿರುವ ಸಹಾಯಕ ಅಭಿಯಂತರರ ಮತ್ತು ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರ ಹುದ್ದೆಗಳ ಅನುಚ್ಛೇಧ ೩೭೧(ಜೆ) ಹೈದ್ರಾಬಾದ್ – ಕರ್ನಾಟಕ ಮೀಸಲಾತಿ ಅಡಿಯಲ್ಲಿ ಜೇಷ್ಠತಾ ಪಟ್ಟಿಗಳನ್ನು ಸಿದ್ದಪಡಿಸಲಾಗಿದೆಯೇ; ಸಿದ್ದಪಡಿಸಿದ್ದಲ್ಲಿ , ಜೇಷ್ಠತಾ ಪಟ್ಟಿಯನ್ನು ಒದಗಿಸುವುದು; ಸದರಿ ಸೇವಾ ಜೇಷ್ಠತಾ ಪಟ್ಟಿಯನ್ನು ತಯಾರಿಸಿರುವ ಅಧಿಕಾರ ಜೆಸ್ಕಾಂ ಹಾಗೂ ಬೆಸ್ಕಾಂಗಳಿಗೆ ನೀಡಲಾಗಿದೆಯೇ? (ಮಾಹಿತಿ ಒದಗಿಸುವುದು)

## "ಶಾಖೋತ್ಪನ್ನ ವಿದ್ಯುತ್" ಘಟಕ ಸ್ಥಾಪನೆ ಬಗ್ಗೆ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ) :–**

೩ (೦೯) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಲಬುರಗಿ ತಾಲ್ಲೂಕಿನಲ್ಲಿ ಉದ್ದೇಶಿತ ಶಾಖೋತ್ಪನ್ನ ವಿದ್ಯುತ್ ಘಟಕ ಸ್ಥಾಪನೆ ಮಾಡಲು ರೈತರ ಫಲವತ್ತಾದ ಭೂಮಿ ಸ್ವಾಧೀನ ಪಡಿಸಿಕೊಂಡಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ;

ಬಂದಿದ್ದಲ್ಲಿ, ಯಾವ ಸಾಲಿನಲ್ಲಿ ಎಷ್ಟು; ಭೂಮಿ, ಪ್ರತಿ ಎಕರೆಗೆ ನೀಡಿದ ಪರಿಹಾರ, ಭೂಮಿ ಕಳೆದುಕೊಂಡ ರೈತರ ಸಂಖ್ಯೆ ಪ್ರತ್ಯೇಕ ಸವಿವರ ಮಾಹಿತಿ ನೀಡುವುದು;

(ಆ) ಸದರಿ ಶಾಖೋತ್ಪನ್ನ ವಿದ್ಯುತ್ ಘಟಕ ೦೬ ವರ್ಷ ಗತಿಸಿದರೂ ಪ್ರಾರಂಭಗೊಳ್ಳದೆ ಯೋಜನೆ ರದ್ದಾಗಿರುವ ಸಂಗತಿ ನಿಜವೇ; (ಸಂಪೂರ್ಣ ಮಾಹಿತಿ ನೀಡುವುದು)

(ಇ) ಸದರಿ ಯೋಜನೆ ಅಡಿಯಲ್ಲಿ ತಮ್ಮ ಫಲವತ್ತಾದ ಭೂಮಿಯನ್ನು ಕಳೆದುಕೊಂಡ ಎಲ್ಲಾ ರೈತರಿಗೆ ಪರಿಹಾರ ನೀಡಲಾಗಿದೆಯೇ; ನೀಡಿದ್ದಲ್ಲಿ ಪರಿಹಾರ ನೀಡಲಾದ ರೈತರ ಮತ್ತು ಬಾಕಿ ಉಳಿದ ರೈತರ ಮಾಹಿತಿ ನೀಡುವುದು;

(ಈ) ಸದರಿ ಯೋಜನೆಯಲ್ಲಿ ತಮ್ಮ ಭೂಮಿಯನ್ನು ಕಳೆದುಕೊಂಡ ರೈತರ ಕುಟುಂಬದವರು ಅನುಕಂಪದ ಆಧಾರದ ಮೇಲೆ ನೇಮಕಾತಿಗಳಿಗಾಗಿ ಅರ್ಜಿಯನ್ನು ಸಲ್ಲಿಸಿದ್ದಾರೆಯೇ; ಇಲ್ಲದೆ ಇದ್ದಲ್ಲಿ, ಈ ನಿಟ್ಟಿನಲ್ಲಿ ಸರ್ಕಾರದ ಮುಂದಿರುವ ಕ್ರಮಗಳೇನು?

## ತೋಟಗಾರಿಕೆ ಇಲಾಖೆಯ ವತಿಯಿಂದ ವಿವಿಧ ಯೋಜನೆ ಹಾಗೂ ಸಹಾಯಧನದ ಬಗ್ಗೆ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ) :–**

೪ (೧೧) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಹೈದ್ರಾಬಾದ್–ಕರ್ನಾಟಕ ಭಾಗದ ೬ ಜಿಲ್ಲೆಗಳು ಹಾಗೂ ಹರಪ್ಪನಹಳ್ಳಿ ತಾಲ್ಲೂಕಿನಲ್ಲಿ ತೋಟಗಾರಿಕೆ ಇಲಾಖೆಯ ವತಿಯಿಂದ

ವಿವಿಧ ಯೋಜನೆಗಳ ಸಹಾಯಧನ ಸವಲತ್ತುಗಳು ಪ್ರಚಾರದ ಕೊರತೆಯಿಂದ ಗ್ರಾಮೀಣ ಭಾಗದ ರೈತರಿಗೆ ಮಾಹಿತಿ ಲಭ್ಯವಾಗದೆ ಸದರಿ ಸವಲತ್ತುಗಳನ್ನು ಪಡೆಯದಿರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ರೈತರಿಗೆ ತೋಟಗಾರಿಕೆ ಬೆಳೆಗಳಿಗೆ ಸರ್ಕಾರದಿಂದ ಸಿಗುವ ಸಹಾಯಧನ, ಸವಲತ್ತು ಹಾಗೂ ವಿವಿಧ ಯೋಜನೆಗಳಾವುವು; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಹೈದ್ರಾಬಾದ್–ಕರ್ನಾಟಕ ಭಾಗದ ಜಿಲ್ಲೆಗಳಿಗೆ ಕಳೆದ ೨ ವರ್ಷಗಳಿಂದ ತೋಟಗಾರಿಕೆ ಇಲಾಖೆಯಲ್ಲಿನ ವಿವಿಧ ಯೋಜನೆಗಳ ಅಡಿಯಲ್ಲಿ ಸರ್ಕಾರದಿಂದ ಬಿಡುಗಡೆಯಾಗಿರುವ ಅನುದಾನವೆಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು)

(ಈ) ಹೈದ್ರಾಬಾದ್–ಕರ್ನಾಟಕ ಭಾಗದ ೬ ಜಿಲ್ಲೆಗಳು ಹಾಗೂ ಹರಪ್ಪನಹಳ್ಳಿ ತಾಲ್ಲೂಕಿನಲ್ಲಿ ಸಹಾಯಧನ ಹಾಗೂ ವಿವಿಧ ಯೋಜನೆಗಳ ಸವಲತ್ತು ಕೋರಿ ಬಂದಿರುವ ಅರ್ಜಿಗಳ ಸಂಖ್ಯೆ ಎಷ್ಟು; ಎಷ್ಟು ಮಂದಿಗೆ ಸಹಾಯಧನ ಹಾಗೂ ವಿವಿಧ ಯೋಜನೆಗಳಲ್ಲಿ ಸವಲತ್ತು ನೀಡಲಾಗಿದೆ; ಬಾಕಿ ಇರುವ ಪ್ರಕರಣಗಳೆಷ್ಟು; (ಯೋಜನೆವಾರು ಫಲಾನುಭವಿಗಳ ಹೆಸರು ಹಾಗೂ ಲೆಕ್ಕಶೀರ್ಷಿಕೆ ಸಹಿತ ವಿವರ ನೀಡುವುದು)

(ಉ) ವಿವಿಧ ಯೋಜನೆಯಡಿಯಲ್ಲಿ ಫಲಾನುಭವಿಗಳನ್ನು ಆಯ್ಕೆ ಮಾಡಲು ಇರುವ ಮಾನದಂಡಗಳೇನು; ಯಾವ ಆಧಾರದ ಮೇಲೆ ಆಯ್ಕೆ ಪಟ್ಟಿಯನ್ನು ಅಂತಿಮಗೊಳಿಸಲಾಗುವುದು? (ಜಿಲ್ಲಾವಾರು ಮಾಹಿತಿ ನೀಡುವುದು)

## “ಜವಾಹರಲಾಲ್ ನೆಹರು ನ್ಯಾಷನಲ್ ಸೋಲಾರ್ ಮೀಷನ್” ಯೋಜನೆಯ ಬಗ್ಗೆ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ) :–**

೫ (೧೦) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಹೈದ್ರಾಬಾದ್–ಕರ್ನಾಟಕ ಭಾಗದ ೬ ಜಿಲ್ಲೆಗಳು ಹಾಗೂ ಹರಪ್ಪನಹಳ್ಳಿ ತಾಲ್ಲೂಕಿನಲ್ಲಿ ಕಳೆದ ೩ ವರ್ಷಗಳಿಂದ “ಜವಾಹರ ಲಾಲ್ ನೆಹರು ನ್ಯಾಷನಲ್ ಸೋಲಾರ್ ಮಿಷನ್” ಯೋಜನೆಯಡಿಯಲ್ಲಿ ಸೋಲಾರ್ ವಿದ್ಯುತ್ ಪಂಪ್‌ಸೆಟ್ ಒದಗಿಸಲಾಗಿರುವ ಫಲಾನುಭವಿಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಕಳೆದ ೩ ವರ್ಷಗಳಿಂದ ರಾಜ್ಯ ಸರ್ಕಾರ ಹಾಗೂ ಕೇಂದ್ರ ಸರ್ಕಾರದಿಂದ ಬಿಡುಗಡೆಯಾಗಿರುವ ಅನುದಾನ ಎಷ್ಟು; ಸದ್ಬಳಕೆ ಮಾಡಿಕೊಂಡಿರುವ ಅನುದಾನವೆಷ್ಟು; ಹಾಗೂ ಸದ್ಬಳಕೆಯಾಗದ ಅನುದಾನವೆಷ್ಟು? (ವಿವರ ನೀಡುವುದು)

## ಸಹಕಾರ ಸಂಘಗಳಿಗೆ ಷೇರು ಬಂಡವಾಳ ನೀಡುವುದು

**ಶ್ರೀ ಎನ್. ಅಪ್ಪಾಜಿಗೌಡ  (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬ (೫೯) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ಮೂರು ವರ್ಷಗಳಲ್ಲಿ ಮಂಡ್ಯ ಜಿಲ್ಲೆಯ ಯಾವ ಯಾವ ಪ್ರಾಥಮಿಕ ಪತ್ತಿನ ಸಹಕಾರ ಸಂಘ ಹಾಗೂ ಹಾಲು ಉತ್ಪಾದಕರ

ಸಂಘಗಳಿಗೆ ಸರ್ಕಾರದ ವತಿಯಿಂದ ಷೇರು ಬಂಡವಾಳವನ್ನು ನೀಡಲಾಗಿದೆ; ಇಲ್ಲದಿದ್ದಲ್ಲಿ ಕಾರಣಗಳೇನು; (ವರ್ಷಾವಾರು, ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಸರ್ಕಾರದಿಂದ ಷೇರು ಬಂಡವಾಳ ನೀಡದಿರುವ ಹಾಲು ಉತ್ಪಾದಕರ ಸಂಘಗಳಿಗೆ ಅಧಿಕಾರೇತರ ಸದಸ್ಯರನ್ನು ನಾಮನಿರ್ದೇಶನ ಮಾಡಲು ಅವಕಾಶವಿದೆಯೇ;

(ಇ) ಹಾಲು ಉತ್ಪಾದಕರ ಸಹಕಾರ ಸಂಘಗಳಿಗೆ ಸರ್ಕಾರದಿಂದ ಸದಸ್ಯರನ್ನು ನಾಮನಿರ್ದೇಶನ ಮಾಡಲು ಇರಬೇಕಾದ ಷರತ್ತುಗಳೇನು;

(ಈ) ಜಿಲ್ಲಾ ಪಂಚಾಯತ್ ಹಾಗೂ ತಾಲ್ಲೂಕು ಪಂಚಾಯತ್‌ನಿಂದ ನೀಡಿರುವ ಅನುದಾನವನ್ನು ಪರಿಗಣಿಸಿ ಸಹಕಾರ ಸಂಘಗಳಿಗೆ ಸರ್ಕಾರದಿಂದ ಸದಸ್ಯರನ್ನು ನಾಮನಿರ್ದೇಶನ ಮಾಡಲು ಅವಕಾಶವಿದೆಯೇ?

## ರಸ್ತೆ ಅಭಿವೃದ್ಧಿ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೭ (೫೮) ಮಾನ್ಯ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ಮೂರು ವರ್ಷಗಳಲ್ಲಿ ನಾಗಮಂಗಲ ವಿಧಾನಸಭಾ ಕ್ಷೇತ್ರಕ್ಕೆ ರಸ್ತೆ ಕಾಮಗಾರಿಗಳಿಗೆ ಬಿಡುಗಡೆಗೊಂಡ ಅನುದಾನ ಎಷ್ಟು; (ಕಾಮಗಾರಿಗಳ ಪೂರ್ಣ ವಿವರ ಹಾಗೂ ಅನುದಾನ ವಿನಿಯೋಗದ ವಿವರವನ್ನು ನೀಡುವುದು)

(ಆ) ಕಳೆದ ಮೂರು ವರ್ಷಗಳಲ್ಲಿ ನೂತನ ಕಟ್ಟಡಗಳ ನಿರ್ಮಾಣಕ್ಕೆ ಬಿಡುಗಡೆಯಾದ ಅನುದಾನ ಎಷ್ಟು; ಯಾವ ಯಾವ ಸ್ಥಳಗಳಲ್ಲಿ ನಿರ್ಮಾಣಗೊಂಡಿದೆ; ಪ್ರತಿ ಕಟ್ಟಡಕ್ಕೆ ಬಿಡುಗಡೆಯಾದ ಅನುದಾನ ಎಷ್ಟು; ಖರ್ಚಾಗಿರುವ ಅನುದಾನ ಎಷ್ಟು;

(ಇ) ಯಾವ ಯಾವ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಸೇತುವೆ ನಿರ್ಮಾಣಗೊಂಡಿದೆ; (ವಿವರ ನೀಡುವುದು)

(ಈ) ಈ ಕ್ಷೇತ್ರದಲ್ಲಿ ನಿರ್ಮಾಣಗೊಂಡಿರುವ ನೂತನ ಪ್ರವಾಸಿ ಮಂದಿರಗಳ ಸಂಖ್ಯೆ ಎಷ್ಟು; ಯಾವ ಯಾವ ಕಟ್ಟಡಕ್ಕೆ ಎಷ್ಟೆಷ್ಟು ಹಣ ಬಿಡುಗಡೆಯಾಗಿದೆ; ಕಾಮಗಾರಿ ಪೂರ್ಣಗೊಂಡಿದೆಯೇ; (೩ ವರ್ಷಗಳ ವಿವರ ನೀಡುವುದು)

(ಉ) ಈ ಕ್ಷೇತ್ರದಲ್ಲಿರುವ ಪರಿಶಿಷ್ಟ ಜಾತಿ ಕಾಲೋನಿಗಳಲ್ಲಿ ಕಾಂಕ್ರಿಟ್ ರಸ್ತೆ ಕಾಮಗಾರಿಗಳಿಗೆ ಬಿಡುಗಡೆಯಾದ ಅನುದಾನ ಎಷ್ಟು? (ಕಾಲೋನಿಗಳ ಹೆಸರು ಮತ್ತು ಪ್ರತಿ ಕಾಲೋನಿಗೆ ವಿನಿಯೋಗಿಸಿರುವ ಅನುದಾನದ ವಿವರ ನೀಡುವುದು)

## ಗುತ್ತಿಗೆದಾರರಿಗೆ ಬಾಕಿ ನೀಡಬೇಕಾಗಿರುವ ಬಿಲ್ಲುಗಳು

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೮ (೫೭) ಮಾನ್ಯ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ಮೂರು ವರ್ಷಗಳಿಂದ ಮಂಡ್ಯ ಜಿಲ್ಲೆಯಲ್ಲಿ ಲೋಕೋಪಯೋಗಿ ಇಲಾಖೆಯ ವಿವಿಧ ಲೆಕ್ಕ ಶೀರ್ಷಿಕೆಗಳಡಿ ಕಾಮಗಾರಿ ಕೈಗೊಂಡು ಪೂರ್ಣಗೊಳಿಸಿರುವ ಗುತ್ತಿಗೆದಾರರಿಗೆ

ಪಾವತಿಗೆ ಬಾಕಿಯಿರುವ ಬಿಲ್ಲುಗಳ ಮೊತ್ತವೆಷ್ಟು; (ಲೆಕ್ಕ ಶೀರ್ಷಿಕೆಗಳವಾರು ಮತ್ತು ಕಾಮಗಾರಿಗಳವಾರು ಹಾಗೂ ಜಿಲ್ಲಾವಾರು ವಿವರಗಳನ್ನು ನೀಡುವುದು)

(ಆ) ಕಳೆದ ಮೂರು ವರ್ಷಗಳಿಂದ ಗುತ್ತಿಗೆದಾರರಿಗೆ ಬಿಡುಗಡೆ ಮಾಡಿರುವ ಕಾಮಗಾರಿಗಳ ಬಿಲ್ಲುಗಳ ಮೊತ್ತವೆಷ್ಟು; (ವರ್ಷಾವಾರು ಮತ್ತು ಕಾಮಗಾರಿಗಳವಾರು ಮಾಹಿತಿ ನೀಡುವುದು)

(ಇ) ಪ್ರಸ್ತುತ ಪಾವತಿಗೆ ಬಾಕಿಯಿರುವ ಬಿಲ್ಲುಗಳ ಮೊತ್ತವೆಷ್ಟು; (ಜಿಲ್ಲಾವಾರು ವಿವರಗಳನ್ನು ನೀಡುವುದು)

(ಈ) ಗುತ್ತಿಗೆದಾರರಿಗೆ ಸಮಯಕ್ಕೆ ಸರಿಯಾಗಿ ಕಾಮಗಾರಿಗಳ ಬಿಲ್ಲು ಹಣವನ್ನು ಪಾವತಿಸದೇ ಇರುವುದರಿಂದ ಗುತ್ತಿಗೆದಾರರು ತೊಂದರೆಯಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಉ) ಹಾಗಿದ್ದಲ್ಲಿ, ಈ ಗುತ್ತಿಗೆದಾರರಿಗೆ ಸಕಾಲದಲ್ಲಿ ಕಾಮಗಾರಿಗಳ ಬಿಲ್ಲಿನ ಮೊತ್ತವನ್ನು ಪಾವತಿಸಲು ಸರ್ಕಾರಕ್ಕಿರುವ ತೊಂದರೆಗಳೇನು?

## ಗೃಹ ನಿರ್ಮಾಣ ಸಹಕಾರ ಸಂಘಗಳ ಕಾರ್ಯಚಟುವಟಿಕೆಗಳು

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೯ (೫೫) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮಂಡ್ಯ ಜಿಲ್ಲೆಯಲ್ಲಿರುವ ಗೃಹ ನಿರ್ಮಾಣ ಸಹಕಾರ ಸಂಘಗಳ ಸಂಖ್ಯೆ ಎಷ್ಟು; (ತಾಲ್ಲೂಕುವಾರು ವಿವರ ನೀಡುವುದು)

(ಆ) ಸದರಿ ಸಂಘಗಳಲ್ಲಿ ಕಾರ್ಯಚಟುವಟಿಕೆಯಲ್ಲಿರುವ ಮತ್ತು ಸ್ಥಗಿತಗೊಂಡ ಗೃಹ ನಿರ್ಮಾಣ ಸಹಕಾರಿ ಸಂಘಗಳ ಸಂಖ್ಯೆ ಎಷ್ಟು;

(ಇ) ೫ ರಿಂದ ೧೦ ವರ್ಷ ಕಳೆದರೂ ಇದುವರೆವಿಗೂ ಫಲಾನುಭವಿಗಳಿಗೆ ನಿವೇಶನ ಹಂಚಿಕೆ ಮಾಡುವಲ್ಲಿ ವಿಫಲಗೊಂಡಿರುವ ಗೃಹ ನಿರ್ಮಾಣ ಸಂಘಗಳ ಸಂಖ್ಯೆ ಎಷ್ಟು; ಅಂತಹ ಸಂಘಗಳ ಮೇಲೆ ಇಲಾಖೆಯು ಕೈಗೊಂಡ ಪರಿಣಾಮಕಾರಿ ಕ್ರಮಗಳು ಯಾವುವು; ದೀರ್ಘ ಕಾಲದಿಂದಲೂ ತಮ್ಮ ಪಾಲಿನ ಹಣವನ್ನು ತುಂಬಿದ್ದು ನಿವೇಶನ ಹಂಚಿಕೆಗಾಗಿ ಕಾಯುತ್ತಿರುವ ನಾಗರಿಕರ ಹಿತರಕ್ಷಣೆಗಾಗಿ ಸರ್ಕಾರ ಕ್ರಮಕೈಗೊಳ್ಳುವುದೇ?

## ಪ್ರಧಾನ ಮಂತ್ರಿ ಫಸಲ್ ಭೀಮಾ ಯೋಜನೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೦ (೫೬) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೇ:–

(ಅ) ೨೦೧೬–೧೭ನೇ ಸಾಲಿನಲ್ಲಿ ಪ್ರಧಾನ ಮಂತ್ರಿ ಫಸಲ್ ಯೋಜನೆಯಡಿ ಮಂಡ್ಯ ಜಿಲ್ಲೆಯಲ್ಲಿ ವಿಮೆ ಕಟ್ಟದವರ ಸಂಖ್ಯೆ ಎಷ್ಟು; ಇದರಲ್ಲಿ ವಿಮೆ ಮಂಜೂರಾಗಿರುವ ಹಾಗೂ ಮಂಜೂರಾಗದೇ ಇರುವವರ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ಮಾಹಿತಿ ಒದಗಿಸುವುದು)

(ಆ) ಮಂಜೂರಾಗದೇ ಇರಲು ಕಾರಣವೇನು;

(ಇ) ಕಳೆದ ಮೂರು ವರ್ಷದ ಸರಾಸರಿ ಫಸಲನ್ನು ಆಧರಿಸಿ ವಿಮೆ ಮಂಜೂರು ಮಾಡುತ್ತಿರುವುದರಿಂದ ಬೆಳೆ ನಷ್ಟ ಹೊಂದಿದ್ದರು ಸಹ ವಿಮೆಗೆ ಅನರ್ಹರಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಈ) ಬಂದಿದ್ದಲ್ಲಿ, ಈ ಸಮಸ್ಯೆಯನ್ನು ಪರಿಹರಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳಾವುವು? (ವಿವರ ಒದಗಿಸುವುದು)

## ಮುಜರಾಯಿ ಇಲಾಖೆಯಿಂದ ನಡೆಯುತ್ತಿರುವ ವಿದ್ಯಾ ಸಂಸ್ಥೆಗಳ ಬಗ್ಗೆ

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನ ಸಭೆಯಿಂದ ಚುನಾಯಿತ ರಾದವರು) :–**

೧೧ (೦೭) ಮಾನ್ಯ ಜವಳಿ ಹಾಗೂ ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಯಚೂರು ಜಿಲ್ಲೆಯ ದೇವಸೂಗುರುನ ಮುಜರಾಯಿ ಇಲಾಖೆಗೆ ಸೇರಿರುವ ಸೂಗುರೇಶ್ವರ ದೇವಸ್ಥಾನದ ಅಡಿಯಲ್ಲಿ ವಿದ್ಯಾ ಸಂಸ್ಥೆ ನಡೆಯುತ್ತಿದೆಯೇ; ಇದು ಮುಜರಾಯಿ ಇಲಾಖಾಗೆ ಸೇರಿದೆಯೇ; ಹಾಗಿದ್ದಲ್ಲಿ, ಭೋಧಕ ಮತ್ತು ಭೋಧಕೇತರ ಸಿಬ್ಬಂದಿಗಳಿಗೆ ಕಳೆದ ಎಂಟು ತಿಂಗಳುಗಳಿಂದ ವೇತನ ನೀಡದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಲ್ಲಿ, ಸರ್ಕಾರ ತೆಗೆದುಕೊಂಡ ಕ್ರಮವೇನು;

(ಆ) ರಾಜ್ಯದಲ್ಲಿ ಮುಜರಾಯಿ ಇಲಾಖೆಯಿಂದ ಯಾವುದಾದರೂ ವಿದ್ಯಾ ಸಂಸ್ಥೆ ನಡೆಯುತ್ತಿದೆಯೇ; ಹಾಗಿದ್ದಲ್ಲಿ, ಸಿಬ್ಬಂದಿಗಳಿಗೆ ವೇತನವು ಮುಜರಾಯಿ ಇಲಾಖೆಯಿಂದ ನೀಡಲಾಗುತ್ತಿದೆಯೇ; (ಪೂರ್ಣ ವಿವರ ಒದಗಿಸುವುದು)

(ಇ) ರಾಯಚೂರು ಜಿಲ್ಲೆಯ ದೇವಸೂಗುರು ಗ್ರಾಮದ ಸೂಗುರೇಶ್ವರ ಸುಕ್ಷೇತ್ರದಲ್ಲಿ ಅನೇಕ ವರ್ಷಗಳಿಂದ ಪ್ರಾರಂಭವಾದ ಶಾಲಾ ಸಿಬ್ಬಂದಿಗಳಿಗೆ ಕನಿಷ್ಟ ವೇತನ ನೀಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು?

## ಗ್ರಾಮ ಪಂಚಾಯತಿ ಮಟ್ಟದಲ್ಲಿ ವಿಎಸ್‌ಎಸ್‌ಎನ್ ಸೊಸೈಟಿ ಪ್ರಾರಂಭಿಸುವ ಬಗ್ಗೆ

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನ ಸಭೆಯಿಂದ ಚುನಾಯಿತ ರಾದವರು) :-**

೧೨ (೦೬) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಯಚೂರು ಜಿಲ್ಲೆಯಲ್ಲಿ ಗ್ರಾಮ ಪಂಚಾಯಿತಿವಾರು ವಿಎಸ್‌ಎಸ್‌ಎನ್ ಸೊಸೈಟಿ ಪ್ರಾರಂಭಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು;

(ಆ) ಜಿಲ್ಲೆಯಲ್ಲಿ ಎಷ್ಟು ವಿಎಸ್‌ಎಸ್‌ಎನ್ ಸೊಸೈಟಿ ಪ್ರಾರಂಭಿಸಲು ಅವಕಾಶವಿದೆ;

(ಇ) ಡಿ.ಸಿ.ಸಿ. ಬ್ಯಾಂಕ್ ವತಿಯಿಂದ ೨೦೧೭-೧೮ರಲ್ಲಿ ನೀಡಿರುವ ಸಾಲದ ಮೊತ್ತ ಎಷ್ಟು ;

(ಈ) ೨೦೧೭-೧೮ರಲ್ಲಿ ನೂತನ ಸದಸ್ಯತ್ವ ಹೊಂದಿರುವ ರೈತರಿಗೆ ಸಾಲ ನೀಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು? (ವಿವರ ನೀಡುವುದು)

## ಕೃಷಿ ಹೊಂಡ, ಸಿರಿಧಾನ್ಯ ಉತ್ಪಾದನೆ ಬಗ್ಗೆ

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನ ಸಭೆಯಿಂದ ಚುನಾಯಿತರಾದವರು) :–**

೧೩ (೦೪) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೭–೧೮ನೇ ಸಾಲಿನಲ್ಲಿ ರಾಯಚೂರು ಜಿಲ್ಲೆಯಲ್ಲಿ ನಿರ್ಮಿಸಿರುವ ಕೃಷಿ ಹೊಂಡಗಳು ಎಷ್ಟು ; ಇವುಗಳ ನಿರ್ಮಾಣಕ್ಕೆ ಖರ್ಚಾಗಿರುವ ಮೊತ್ತ ಎಷ್ಟು ;

(ಆ) ರಾಜ್ಯದಲ್ಲಿ ಸಿರಿಧಾನ್ಯ ಉತ್ಪಾದನೆ ಮಾಡಲು ರೈತರಿಗೆ ಪ್ರೋತ್ಸಾಹಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು?

## ಲೋಕೋಪಯೋಗಿ ಇಲಾಖೆಯ ಯೋಜನೆಗಳಿಗೆ ಮಂಜೂರಾದ ಅನುದಾನದ ಬಗ್ಗೆ

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನ ಸಭೆಯಿಂದ ಚುನಾಯಿತರಾದವರು) :–**

೧೪ (೦೫) ಮಾನ್ಯ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯವನ್ನು ದಯವಿಟ್ಟು ತಿಳಿಸುವರೆ:–

೨೦೧೭–೧೮ನೇ ಸಾಲಿನಲ್ಲಿ ರಾಯಚೂರು ಜಿಲ್ಲೆಯಲ್ಲಿ ಅಪೇಂಡಿಕ್ಸ್–ಸಿ/ಸಿಆರ್‌ಎಫ್/ನಬಾರ್ಡ್ ಹಾಗೂ ಲೋಕೋಪಯೋಗಿ ಇಲಾಖೆಗೆ ಸೇರಿರುವ ಯೋಜನೆಗಳಿಗೆ ಮಂಜೂರಾದ ಅನುದಾನ ಎಷ್ಟು ;ಆ ಪೈಕಿ ಈವರೆವಿಗೂ ಎಷ್ಟು ಯೋಜನೆಗಳು ಜಾರಿಗೆ ಬಂದಿವೆ?

## ರೈತರ ಸಾಲಮನ್ನಾ ಕುರಿತು

**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ (ಶಿಕ್ಷಕರ ಕ್ಷೇತ್ರ) :–**

೧೫ (೧೭) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ವಿವಿಧ ಬ್ಯಾಂಕು ಮತ್ತು ಇನ್ನಿತರೆ ಹಣಕಾಸು ಸಂಸ್ಥೆಗಳ ಮೂಲಕ ಸಾಲ ಪಡೆದಂತಹ ರೈತರ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ರಾಜ್ಯ ಸರಕಾರ ರೈತರ ಸಾಲ ಇಲ್ಲಿಯವರೆಗೆ ಎಷ್ಟು ಮನ್ನಾ ಮಾಡಿದೆ; ಹಾಗೂ ಉಳಿದ ಸಾಲವನ್ನು ಒಮ್ಮೆಲೆ ಮನ್ನಾ ಮಾಡಲು ಸರ್ಕಾರ ಕ್ರಮ ಕೈಗೊಳ್ಳಬಹುದೇ;

(ಇ) ರಾಜ್ಯದಲ್ಲಿ ಮತ್ತು ಕೇಂದ್ರ ಸರಕಾರ ಸಂಸ್ಥೆಗಳಲ್ಲಿ ಇರುವ ಸಾಲವೆಷ್ಟು ; ರಾಜ್ಯ ಸರಕಾರ ಅಡಿಯಲ್ಲಿರುವ ಸಾಲವೆಷ್ಟು?

## ರಾಜ್ಯದಲ್ಲಿ ನೋಂದಣಿಯಾದ ಸಹಕಾರ ಸಂಘಗಳ ಕುರಿತು

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) :–**

೧೬ (೬೧) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ನೋಂದಣಿಯಾದ ರಾಜ್ಯ ಮಟ್ಟದ/ಜಿಲ್ಲಾ ಮಟ್ಟದ/ ತಾಲ್ಲೂಕು ಮಟ್ಟದ ಹಾಗೂ ಗ್ರಾಮ ಮಟ್ಟದ ಸಹಕಾರ ಸಂಘಗಳ ಸಂಖ್ಯೆ ಎಷ್ಟು ; (ವರ್ಗಾವಾರು ಮಾಹಿತಿ ನೀಡುವುದು)

(ಆ) ಈ ಸಹಕಾರಿ ಸಂಘಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಸಂಘಗಳೆಷ್ಟು; ಅವುಗಳಲ್ಲಿ ನಷ್ಟವನ್ನು ಅನುಭವಿಸುತ್ತಿರುವ ಸಂಘಗಳ ಸಂಖ್ಯೆ ಎಷ್ಟು ;

(ಇ) ನಷ್ಟದಲ್ಲಿ ನಡೆಯುತ್ತಿರುವ ಸಹಕಾರಿ ಸಂಘಗಳ ಪುನರ್‌ಚೇತನಕ್ಕೆ ಸರ್ಕಾರ ಹಮ್ಮಿಕೊಂಡಿರುವ ಯೋಜನೆಗಳಾವುವು?

## ಶರಾವತಿ ಕಣಿವೆಯಲ್ಲಿ ಹೊಸ ಜಲವಿದ್ಯುತ್ ಯೋಜನೆ ಆರಂಭಿಸುವ ಬಗ್ಗೆ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) :–**

೧೭ (೬೨) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಶರಾವತಿ ಕಣಿವೆಯಲ್ಲಿ ಹೊಸ ಜಲವಿದ್ಯುತ್ ಯೋಜನೆ ಆರಂಭಿಸುವ ಯೋಚನೆ ಸರ್ಕಾರದ ಮುಂದಿದೆಯೇ;

(ಆ) ಈ ಯೋಜನೆಗೆ ಪೂರ್ಣ ಯೋಜನಾ ವರದಿ (DPR) ಸಿದ್ಧಪಡಿಸಲಾಗಿದೆಯೇ;

(ಇ) ಸಿದ್ಧವಾಗಿದ್ದರೆ ಅದರ ರೂಪುರೇಷೆಗಳ ಬಗ್ಗೆ ಸಂಪೂರ್ಣ ವಿವರ ನೀಡುವುದು;

(ಈ) ಈ ಯೋಜನೆ ಕೈಗೊಳ್ಳಲು ವೆಚ್ಚ ಮಾಡಲಾಗುವ ಅಂದಾಜು ಮೊತ್ತವೆಷ್ಟು? (ವಿವರವಾದ ಮಾಹಿತಿ ಒದಗಿಸುವುದು)

## ಪಶುಸಂಗೋಪನಾ ಇಲಾಖೆಯಲ್ಲಿ ಹೈದರಾಬಾದ್–ಕರ್ನಾಟಕ ಭಾಗಕ್ಕೆ ಮಂಜೂರಾದ ಹುದ್ದೆಗಳ ವಿವರ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) :–**

೧೮ (೬೩) ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಪಶುಸಂಗೋಪನಾ ಇಲಾಖೆಯಲ್ಲಿ ಹೈದ್ರಾಬಾದ್-ಕರ್ನಾಟಕ ಭಾಗದ ಜನರಿಗಾಗಿ ಮಂಜೂರಾದ ಹುದ್ದೆಗಳ ಸಂಖ್ಯೆ ಎಷ್ಟು ;

(ಆ) ಈ ಹುದ್ದೆಗಳಲ್ಲಿ ಪ್ರಸ್ತುತ ಖಾಲಿಯಿರುವ ಹುದ್ದೆಗಳ ಸಂಖ್ಯೆ ಎಷ್ಟು ;

(ಇ) ರಾಜ್ಯದಲ್ಲಿ ಇರುವ ಒಟ್ಟು ಜಂಟಿ ನಿರ್ದೇಶಕರ ಸಂಖ್ಯೆ ಎಷ್ಟು ಮತ್ತು ಅವುಗಳು ಯಾವ್ಯಾವ ಜಿಲ್ಲೆಗಳಲ್ಲಿ ಇವೆ;

(ಈ) ಈ ಮಂಜೂರಾದ ಹುದ್ದೆಗಳಲ್ಲಿ ಖಾಲಿಯಿರುವ ಹುದ್ದೆಗಳ ಸಂಖ್ಯೆ ಎಷ್ಟು ಮತ್ತು ಯಾವ ಭಾಗದಲ್ಲಿ ಖಾಲಿಯಿವೆ ? (ವಿವರವಾದ ಮಾಹಿತಿಯನ್ನು ನೀಡುವುದು)

## ಇಂದಿರಾ ವಸ್ತ್ರಯೋಜನೆ ಜಾರಿಗೊಳಿಸುವ ಬಗ್ಗೆ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) :-**

೧೯ (೬೪) ಮಾನ್ಯ ಜವಳಿ ಹಾಗೂ ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಸರ್ಕಾರವು ಇತರೆ ಯೋಜನೆಗಳೊಂದಿಗೆ "ಇಂದಿರಾ ವಸ್ತ್ರ ಭಾಗ್ಯ" ಎಂಬ ಯೋಜನೆಯನ್ನು ಜಾರಿಗೆ ತರುವುದಾಗಿ ವರದಿ ಮಾಡಿರುವುದು ನಿಜವೇ;

(ಆ) ಈ ತರಹದ ಯೋಜನೆಯನ್ನು ಜಾರಿಗೆ ತರಲು ಉದ್ದೇಶಿಸಿದ್ದರೆ ಇದರ ರೂಪುರೇಷೆಗಳೇನು ;

(ಇ) ಈ ಯೋಜನೆಯನ್ನು ಜಾರಿಗೆ ತರಲಾಗುವುದು ಯಾವಾಗ;

(ಈ) ತರುವುದಾದರೆ ಈ ಯೋಜನೆಗೆ ಮೀಸಲಿಟ್ಟಿರುವ ಹಣವೆಷ್ಟು?

## ಕೃಷಿ ಇಲಾಖೆಯ ಯೋಜನೆಗಳು

**ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೦ (೪೩) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೃಷಿ ಇಲಾಖೆಯಲ್ಲಿ ಹಾಕಿಕೊಂಡಿರುವ ವಿವಿಧ ಯೋಜನೆಗಳು ಯಾವುವು ; ಯಾವ ಯಾವ ಯೋಜನೆಗೆ ಎಷ್ಟೆಷ್ಟು ಸಹಾಯಧನ ನೀಡಲಾಗುತ್ತದೆ ;

(ಆ) ಈ ಯೋಜನೆಗಳ ಬಗ್ಗೆ ರೈತರಿಗೆ ತಿಳಿಸಲು ಯಾವ ರೀತಿ ಪ್ರಚಾರ ನೀಡಲಾಗಿದೆ ; ಪ್ರಚಾರದ ಕೊರತೆಯಿಂದ ರೈತರಿಗೆ ಸಿಗಬೇಕಾದ ಸೌಲಭ್ಯಗಳು ಸಿಗದೆ ವಂಚಿತರಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದರೆ, ಸರ್ಕಾರ ಕೈಗೊಂಡಿರುವ ಕ್ರಮಗಳೇನು?

## ಸಮುದ್ರದ ಉಪ್ಪು ನೀರಿನಿಂದಾಗಿ ಬೆಳೆಗಳಿಗೆ ಹಾನಿಯಾಗಿರುವ ಬಗ್ಗೆ

**ಡಾ: ಜಯಮಾಲ ರಾಮಚಂದ್ರ (ನಾಮನಿರ್ದೇಶನ ಹೊಂದಿದವರು) :–**

೨೧ (೨೯) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೇಸಿಗೆ ಕಾಲದಲ್ಲಿ ಕಾರವಾರದಿಂದ ಭಟ್ಕಳದವರೆಗೂ ಇರುವ ೦೬ ತಾಲ್ಲೂಕುಗಳಲ್ಲಿ ಸಮುದ್ರದಿಂದ ಉಪ್ಪು ನೀರು ಬಂದು ಸುಮಾರು ೨೦೦೦ ಹೆಕ್ಟೇರ್ ಜಮೀನಿನಲ್ಲಿ ಬೆಳೆದ ಬೆಳೆಗಳು ನಾಶವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಸರಿಯಾದ ಸಮಯಕ್ಕೆ ವಡ್ಡುಗೆ ಹಲಗೆ ಹಾಕದೇ ಸಮುದ್ರದ ಉಬ್ಬರದ ಏರಿಳಿತದಿಂದ ಜಮೀನುಗಳಿಗೆ ಉಪ್ಪುನೀರು ಬಂದು ರೈತರ ಬೆಳೆ ನಾಶವಾಗಿರುವ ಎಷ್ಟು ರೈತರಿಗೆ ಪರಿಹಾರ ನೀಡಲಾಗಿದೆ; (ಅಂಕಿ–ಅಂಶಗಳನ್ನು ನೀಡುವುದು)

(ಇ) ಈ ಪ್ರದೇಶಗಳಲ್ಲಿನ ಫಜನಿ ಭೂಮಿ (KHAR LAND) ಅಭಿವೃದ್ಧಿ ಪಡಿಸಲಾಗಿದೆಯೇ ? (ವಿವರಗಳನ್ನು ನೀಡುವುದು)

## ಮುಜರಾಯಿ ಇಲಾಖೆಯಡಿಯಲ್ಲಿ ವರ್ಗೀಕರಣಗೊಂಡ ದೇವಸ್ಥಾನಗಳ ಕುರಿತು

**ಡಾ: ಜಯಮಾಲ ರಾಮಚಂದ್ರ (ನಾಮನಿರ್ದೇಶನ ಹೊಂದಿದವರು) :–**

೨೨ (೩೫) ಮಾನ್ಯ ಜವಳಿ ಹಾಗೂ ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮುಜರಾಯಿ ಇಲಾಖೆ ಅಡಿಯಲ್ಲಿ ನೋಂದಣಿಯಾಗಿರುವ ದೇವಸ್ಥಾನಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಅಂಕಿ–ಅಂಶಗಳನ್ನು ನೀಡುವುದು)

(ಆ) ಇದರಲ್ಲಿ ಎಷ್ಟು ದೇವಸ್ಥಾನಗಳು ಎ, ಬಿ ಮತ್ತು ಸಿ ಅಡಿಯಲ್ಲಿ ವರ್ಗೀಕರಣಗೊಂಡಿವೆ ; (ಅಂಕಿ–ಅಂಶಗಳನ್ನು ನೀಡುವುದು)

(ಇ) ಇದುವರೆಗೆ ವರ್ಗೀಕರಣವಾಗದೇ ಉಳಿದಿರುವ ದೇವಸ್ಥಾನಗಳೆಷ್ಟು ಮತ್ತು ಕಾರಣಗಳೇನು ;

(ಈ) ತಿರುಮಲದಲ್ಲಿ ಕರ್ನಾಟಕ ಯಾತ್ರಿ ನಿವಾಸ ಸ್ಥಾಪನೆಯಾಗಿದೆಯೇ; ಸ್ಥಾಪನೆಯಾಗದಿದ್ದಲ್ಲಿ, ಕಾರಣಗಳನ್ನು ನೀಡುವುದು ?

## ಪುಷ್ಪೋದ್ಯಮ ಅಭಿವೃದ್ಧಿ ಕುರಿತು

**ಡಾ: ಜಯಮಾಲ ರಾಮಚಂದ್ರ (ನಾಮನಿರ್ದೇಶನ ಹೊಂದಿದವರು) :–**

೨೩ (೩೬) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಪುಷ್ಪೋದ್ಯಮ ಅಭಿವೃದ್ಧಿಗಾಗಿ ಅನುಷ್ಠಾನಗೊಳಿಸುತ್ತಿರುವ ಯೋಜನೆಗಳಾವುವು ;

(ಆ) ರಾಜ್ಯದಲ್ಲಿ ರಫ್ತು ಮಾಡಲಾಗುತ್ತಿರುವ ಪುಷ್ಪಗಳು ಯಾವುವು ; ಅವುಗಳ ಪ್ರಮಾಣವೆಷ್ಟು ;

(ಇ) ಈ ಉದ್ಯಮದಲ್ಲಿ ತೊಡಗಿಸಿಕೊಂಡಿರುವ ರೈತರುಗಳಿಗೆ ನೀಡುತ್ತಿರುವ ಅರ್ಥಿಕ ನೆರವು ಮತ್ತು ತರಬೇತಿ ಕಾರ್ಯಕ್ರಮಗಳಾವುವು ; ಪುಷ್ಪೋದ್ಯಮ ವಲಯ ಅಭಿವೃದ್ಧಿಗೆ ಇಲಾಖಾ ಮತ್ತು ಕೇಂದ್ರಗಳು ನೀಡುತ್ತಿರುವ ಅನುದಾನಗಳೆಷ್ಟು;

(ಈ) ಕಳೆದ ೫ ವರ್ಷಗಳಿಂದ ಲಾಲ್ ಬಾಗ್‌ನಲ್ಲಿ ನಡೆಸಲಾಗುತ್ತಿರುವ ಫಲಪುಷ್ಪ ಪ್ರದರ್ಶನಗಳಿಗೆ ಎಷ್ಟು ಜನ ಭಾಗವಹಿಸಿರುತ್ತಾರೆ ; ಇದರಿಂದ ಸಂಗ್ರಹವಾದ ಒಟ್ಟು ಹಣವೆಷ್ಟು ?

## ನೂತನ ಜವಳಿ ನೀತಿ ಯೋಜನೆಯಡಿಯಲ್ಲಿ ನೇಕಾರರಿಗೆ ಸಿಗುವ ಸೌಲಭ್ಯ ಕುರಿತು

**ಡಾ: ಜಯಮಾಲ ರಾಮಚಂದ್ರ (ನಾಮನಿರ್ದೇಶನ ಹೊಂದಿದವರು) :–**

೨೪ (೩೭) ಮಾನ್ಯ ಜವಳಿ ಹಾಗೂ ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ನೂತನ ಜವಳಿ ನೀತಿ ಯೋಜನೆಯಡಿ ಕರ್ನಾಟಕ ರಾಜ್ಯದಲ್ಲಿ ಎಷ್ಟು ಜನರಿಗೆ ಯಾಂತ್ರಿಕೃತ ಹೊಲಿಗೆ ಯಂತ್ರ ಮತ್ತು ಕೈಮಗ್ಗ ನೇಕಾರಿಕೆಯಲ್ಲಿ ತರಬೇತಿ ನೀಡಲಾಗಿದೆ ; (ಅಂಕಿ-ಅಂಶಗಳನ್ನು ನೀಡುವುದು)

(ಆ) ಬಡ ಮತ್ತು ಮಧ್ಯಮ ವರ್ಗದ ನೇಕಾರರ ಸಾಲ ಮನ್ನಾ ಆಗಿದೆಯೇ ; ಆಗಿದ್ದಲ್ಲಿ, ಜಿಲ್ಲಾವಾರು ಅಂಕಿ-ಅಂಶಗಳನ್ನು ನೀಡುವುದು ;

(ಇ) ಎಷ್ಟು ನೇಕಾರರು ಸಹಾಯಾನುದಾನಕ್ಕಾಗಿ ಅರ್ಜಿ ಸಲ್ಲಿಸಿದ್ದಾರೆ; ಎಷ್ಟು ಫಲಾನುಭವಿಗಳಿಗೆ ಸಹಾಯ ಧನ ನೀಡಲಾಗಿದೆ ? (ಜಿಲ್ಲಾವಾರು ಅಂಕಿ-ಅಂಶಗಳನ್ನು ನೀಡುವುದು)

## ಕೃಷಿ ಮಾರುಕಟ್ಟೆಗಳ (ಎ.ಪಿ.ಎಂ.ಸಿ.) ಕುರಿತು

**ಡಾ: ಜಯಮಾಲ ರಾಮಚಂದ್ರ (ನಾಮನಿರ್ದೇಶನ ಹೊಂದಿದವರು) :-**

೨೫ (೩೪) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಾದ್ಯಂತ ಅಸ್ತಿತ್ವದಲ್ಲಿರುವ ಕೃಷಿ ಮಾರುಕಟ್ಟೆಗಳ ಸಂಖ್ಯೆ ಎಷ್ಟು ; ಸರ್ಕಾರದ ವತಿಯಿಂದ ನಿರ್ಮಾಣವಾಗುತ್ತಿರುವ / ನಿರ್ಮಾಣ ಹಂತದಲ್ಲಿರುವ / ನಿರ್ಮಿಸಲು ಉದ್ದೇಶಿಸಿರುವ ಕೃಷಿ ಮಾರುಕಟ್ಟೆಗಳ ವಿವರ ನೀಡುವುದು ;

(ಆ) ನಗರ, ಪಟ್ಟಣ ಮತ್ತು ಗ್ರಾಮೀಣ ಪ್ರದೇಶದಲ್ಲಿ ಸಂಚಾರಿ ಹಾಪ್ ಕಾಮ್ಸ್ ಸ್ಥಾಪಿಸುವ ಯೋಜನೆ ಸರ್ಕಾರದ ಮುಂದಿದೆಯೇ; (ವಿವರಗಳನ್ನು ನೀಡುವುದು)

(ಇ) ತರಕಾರಿ ಬೆಲೆ ಸ್ಥಿರತೆ ಕಾಯ್ದುಕೊಳ್ಳಲು ಹಾಗೂ ಕನಿಷ್ಠ ಬೆಲೆ ನಿಗಧಿ ಮಾಡಲು ಸರ್ಕಾರ ಚಿಂತನೆ ನಡೆಸಿದೆಯೇ ; ಇಲ್ಲದಿದ್ದಲ್ಲಿ, ಕ್ರಮಕೈಗೊಳ್ಳಲು ಉದ್ದೇಶಿಸಿರುವ ಬಗ್ಗೆ ವಿವರ ನೀಡುವುದು?

## ಕೃಷಿ ಮಾರುಕಟ್ಟೆ ಸ್ಥಿತಿಗತಿ ಬಗ್ಗೆ

**ಶ್ರೀಮತಿ ಜಯಮ್ಮ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೬ (೩೮) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೭–೧೮ನೇ ಸಾಲಿನಲ್ಲಿ ಕೊಟ್ಟೂರಿನ ಕೃಷಿ ಉತ್ಪನ್ನ ಮಾರುಕಟ್ಟೆಯಲ್ಲಿ ಶೇಂಗಾ ಮತ್ತು ಹತ್ತಿ ವಹಿವಾಟು (ಕ್ವಿಂಟಲ್ ಗಳಲ್ಲಿ) ಎಷ್ಟು ಪ್ರಮಾಣದಲ್ಲಿ ನಡೆದಿದೆ ;

(ಆ) ಕೊಟ್ಟೂರು ಕೃಷಿ ಉತ್ಪನ್ನ ಮಾರುಕಟ್ಟೆಯಲ್ಲಿರುವ ಗೋದಾಮುಗಳ ಸಂಖ್ಯೆ ಎಷ್ಟು ;

(ಇ) ಗೋದಾಮುಗಳನ್ನು ಹೆಚ್ಚಿಸುವ ಉದ್ದೇಶ ಸರ್ಕಾರಕ್ಕೆ ಇದೆಯೇ?

## ಮೆಸ್ಕಾಂನಲ್ಲಿರುವ ಸೌಲಭ್ಯ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೭ (೧೨) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಒಟ್ಟು ಎಷ್ಟು ಎಸ್ಕಾಂಗಳಿವೆ; ಅವು ಯಾವುವು ; ಎಸ್ಕಾಂವಾರು ಮಂಜೂರಾದ ಮತ್ತು ಖಾಲಿಯಿರುವ ಹುದ್ದೆಗಳ ಸಂಖ್ಯೆ ಎಷ್ಟು ;

(ಆ) ಕಳೆದ ೫ ವರ್ಷಗಳ ಎಸ್ಕಾಂಗಳ ವಾರ್ಷಿಕ ಲಾಭ–ನಷ್ಟದ ಪರಿಮಾಣ ಎಷ್ಟು ; (ವರ್ಷವಾರು ಎಸ್ಕಾಂವಾರು ವಿವರ ನೀಡುವುದು)

(ಇ) ವಿವಿಧ ಎಸ್ಕಾಂ ವಲಯಗಳಲ್ಲಿ ಬಾಕಿಯಿರುವ ವಿದ್ಯುತ್ ಬಿಲ್ಲಿನ ಮೊತ್ತವೆಷ್ಟು ; ವಸೂಲಾಗುವ ಮೊತ್ತದ ಸರಾಸರಿ ಪರಿಮಾಣ ಎಷ್ಟು ; (ವರ್ಷವಾರು, ಎಸ್ಕಾಂವಾರು ವಿವರ ನೀಡುವುದು)

(ಈ) ಬಾಕಿ ವಿದ್ಯುತ್ ವಸೂಲಿ, ವಿದ್ಯುತ್ ಕಳ್ಳತನ ತಡೆಗಟ್ಟಲು ಸರ್ಕಾರ ಕೈಗೊಂಡ ಕ್ರಮಗಳೇನು ;

(ಉ) ವಿದ್ಯುತ್ ಬಿಲ್ ಪಾವತಿಯನ್ನು ನಗದುರಹಿತವನ್ನಾಗಿ ಮಾಡಲು ಆನ್‌ಲೈನ್ ಪಾವತಿ ಮತ್ತು ಆ್ಯಪ್ ಆಧಾರಿತ ಪಾವತಿಗೆ ಪ್ರೋತ್ಸಾಹಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ; ಮುಂದೆ ಯಾವ ಕ್ರಮ ಕೈಗೊಳ್ಳಲಿದೆ ?

## ದೇವಸ್ಥಾನಗಳಿಗೆ ತಸ್ತೀಕ್ ಹಣ ಬಿಡುಗಡೆಯಲ್ಲಿ ವಿಳಂಬದ ಕುರಿತು

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೮ (೫೪) ಮಾನ್ಯ ಜವಳಿ ಹಾಗೂ ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿರುವ ಎಷ್ಟು ದೇವಾಲಯಗಳಿಗೆ ತಸ್ತೀಕ್ ಹಣ ನೀಡಲಾಗುತ್ತಿದೆ ; (ಜಿಲ್ಲಾವಾರು ವಿವರ ನೀಡುವುದು)

(ಆ) ಪ್ರತಿ ದೇವಸ್ಥಾನಗಳಿಗೆ ವಾರ್ಷಿಕ ನೀಡುತ್ತಿರುವ ತಸ್ತೀಕ್ ಹಣವೆಷ್ಟು;

(ಇ) ಈ ಹಣವನ್ನು ನೀಡುವಾಗ ಯಾವ ಖಾತೆಗೆ ಜಮೆ ಮಾಡಲಾಗುತ್ತಿದೆ ;

(ಈ) ತಸ್ತೀಕ್ ಹಣವನ್ನು ನೀಡುವಾಗ ಯಾವ ಮಾದರಿಯಲ್ಲಿ ಮತ್ತು ಯಾವ ಮಾನದಂಡದಲ್ಲಿ ಹಂಚಿಕೆ ಮಾಡಲಾಗುತ್ತಿದೆ ;

(ಉ) ಉಪ ವಿಭಾಗಾಧಿಕಾರಿ ಮತ್ತು ತಹಶೀಲ್ದಾರರು ದೇವಸ್ಥಾನಗಳಿಗೆ ತಸ್ತೀಕ್ ಮಂಜೂರು ಮಾಡಿ ಆದೇಶ ನೀಡಿದರೂ ಧಾರ್ಮಿಕ ಇಲಾಖೆಯಿಂದ ತಸ್ತೀಕ್ ಹಣ ಪಾವತಿಸದಿರಲು ಕಾರಣವೇನು; ಹೀಗೆ ಬಾಕಿ ಇರುವ ಪ್ರಕರಣಗಳು ಎಷ್ಟು ; ಹೀಗೆ ಬಾಕಿ ಇರುವ ತಸ್ತೀಕ್ ಹಣ ಬಿಡುಗಡೆ ಮಾಡಲು ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ ?

## ಸಮಾಪನಾ ಸ್ಥಿತಿಯಲ್ಲಿರುವ ಸಹಕಾರಿ ಸಂಘಗಳ ಪುನಃಶ್ಚೇತನಕ್ಕೆ ಕ್ರಮ ಕೈಗೊಳ್ಳುವ ಕುರಿತು

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೯ (೫೩) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸಹಕಾರ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ಒಟ್ಟು ಸಹಕಾರಿ ಸಂಘಗಳೆಷ್ಟು ;

(ಆ) ಅವುಗಳಲ್ಲಿ ಲಾಭದಾಯಕ ಸಂಸ್ಥೆಗಳಾಗಿ ಮಾರ್ಪಟ್ಟಿರುವ ಸಹಕಾರಿ ಸಂಘಗಳೆಷ್ಟು ; ಸಮಾಪನಾ ಸ್ಥಿತಿಯಲ್ಲಿರುವ ಸಂಸ್ಥೆಗಳೆಷ್ಟು ;

(ಇ) ಸಮಾಪನ ಸ್ಥಿತಿಯಲ್ಲಿರುವ ಸಂಘಗಳನ್ನು ಲಾಭದಾಯಕ ಸಂಘಗಳಾಗಿ ಪರಿವರ್ತಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ; (ಸಂಪೂರ್ಣ ವಿವರ ನೀಡುವುದು)

(ಈ) ಈಗಾಗಲೇ ಟೀಕೆಗೊಳಗಾಗಿರುವ ಸಹಾಯಕ ರಿಜಿಸ್ಟ್ರಾರ್ ಮತ್ತು ಜಿಲ್ಲಾ ರಿಜಿಸ್ಟ್ರಾರ್ ನ್ಯಾಯಾಲಯಗಳಲ್ಲಿನ ರಾಜಕೀಯ ಒತ್ತಡದ ಆರೋಪದ ಹಿನ್ನಲೆಯಲ್ಲಿ ಜಿಲ್ಲಾ ಮತ್ತು ರಾಜ್ಯ ಮಟ್ಟದಲ್ಲಿ ಪ್ರತ್ಯೇಕ ಸಹಕಾರಿ ನ್ಯಾಯಾಲಯ ಪ್ರಾರಂಭಿಸುವ ಉದ್ದೇಶ ಇದೆಯೇ ; ಈ ಕುರಿತು ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ?

## ವಿಂಡ್ ವೀಲ್ ಹಾಗೂ ಸೌರ ವಿದ್ಯುತ್ ಘಟಕಗಳ ಕುರಿತು

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೦ (೫೨) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿರುವ ಸೌರ ವಿದ್ಯುತ್ ಮತ್ತು ವಿಂಡ್ ವೀಲ್ ಘಟಕಗಳೆಷ್ಟು; (ಸರ್ಕಾರಿ–ಖಾಸಗಿ, ತಾಲ್ಲೂಕುವಾರು, ಜಿಲ್ಲಾವಾರು ವಿವರ ನೀಡುವುದು) ಅವುಗಳಿಗೆ ಯಾವ ರೀತಿಯ ಅನುಮತಿ ನೀಡಲಾಗುತ್ತಿದೆ ; ಸರ್ಕಾರದಿಂದ ಯಾವ ರೀತಿಯ ರಿಯಾಯಿತಿಗಳನ್ನು ಒದಗಿಸಲಾಗುತ್ತಿದೆ ;

(ಆ) ರಾಜ್ಯದಲ್ಲಿರುವ ಕಿರು ಜಲವಿದ್ಯುತ್ ಸ್ಥಾವರಗಳು ಯಾವುವು ; ಅವುಗಳಿಂದ ಉತ್ಪತ್ತಿಯಾಗುವ ವಿದ್ಯುತ್ ಪ್ರಮಾಣವೆಷ್ಟು ;

(ಇ) ಖಾಸಗಿ ಜಲವಿದ್ಯುತ್ ಘಟಕಗಳೆಷ್ಟು ; ಅವುಗಳಿಗೆ ಯಾವ ರೀತಿಯ ಅನುಮತಿ ನೀಡಲಾಗುತ್ತಿದೆ ; ಸರ್ಕಾರದಿಂದ ಯಾವ ರೀತಿಯ ರಿಯಾಯಿತಿಗಳನ್ನು ಒದಗಿಸಲಾಗುತ್ತಿದೆ ?

## ಮರಳು ಗಣಿಗಾರಿಕೆಯಿಂದ ಬರುವ ಆದಾಯದ ಶೇ. ೨೫% ಹಣವನ್ನು ಗ್ರಾಮ ಪಂಚಾಯಿತಿಗಳಿಗೆ ನೀಡದೆ ಇರುವ ಕುರಿತು

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೩೧ (೭೮) ಮಾನ್ಯ ಲೊಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮರಳು ಗಣಿಗಾರಿಕೆಯಿಂದ ವಸೂಲಾದ ರಾಜಧನದಲ್ಲಿ ಶೇ. ೨೫% ಹಣವನ್ನು ಸಂಬಂಧಪಟ್ಟ ಗ್ರಾಮ ಪಂಚಾಯಿತಿಗಳಿಗೆ ಪಾವತಿಸುವ ನಿಯಮ ಇರುವುದು ನಿಜವೇ ;

(ಆ) ಹಾಗಿದ್ದಲ್ಲಿ, ಕಳೆದ ಐದು ವರ್ಷಗಳಲ್ಲಿ ಲೋಕೋಪಯೋಗಿ ಇಲಾಖೆಯ ಮೂಲಕ ಮರಳುಗಾರಿಕೆ ಸಂಬಂಧ ವಸೂಲಾದ ರಾಜಧನದ ಮೊತ್ತವೆಷ್ಟು ; (ವರ್ಷವಾರು, ಜಿಲ್ಲಾವಾರು ವಿವರ ನೀಡುವುದು)

(ಇ) ಗ್ರಾಮ ಪಂಚಾಯತಿಗಳಿಗೆ/ಸ್ಥಳೀಯ ಸಂಸ್ಥೆಗಳಿಗೆ ಪಾವತಿಸಲು ಬಾಕಿ ಇರುವ ಒಟ್ಟು ಮೊತ್ತವೆಷ್ಟು ; (ವರ್ಷವಾರು, ಜಿಲ್ಲಾವಾರು ವಿವರ ನೀಡುವುದು)

(ಈ) ಗ್ರಾಮ ಪಂಚಾಯತಿಗಳಿಗೆ ಹಣ ಪಾವತಿಸಲು ೩–೪ ವರ್ಷದಿಂದ ವಿಳಂಭವಾಗಲು ಕಾರಣಗಳೇನು ; ವಿಳಂಭಕ್ಕೆ ಕಾರಣರಾದ ಅಧಿಕಾರಿಗಳ್ಯಾರು ; (ವಿವರ ನೀಡುವುದು)

(ಉ) ಗ್ರಾಮ ಪಂಚಾಯತಿಗಳು ಸೇರಿದಂತೆ ಸ್ಥಳೀಯ ಆಡಳಿತ ಸಂಸ್ಥೆಗಳಿಗೆ ಪಾವತಿಸಲು ಬಾಕಿ ಇರುವ ರಾಜಧನದ ಮೊತ್ತವನ್ನು ಶೀಘ್ರವಾಗಿ ಬಿಡುಗಡೆ ಮಾಡುವ ಬಗ್ಗೆ ಸರ್ಕಾರವು ಯಾವ ಕ್ರಮಗಳನ್ನು ಕೈಗೊಳ್ಳಲಿದೆ ? (ಸಂಪೂರ್ಣ ವಿವರ ನೀಡುವುದು)

## ಕಾನೂನು ಬಾಹಿರವಾಗಿ ರೈತರ ಹಸುಗಳಿಗೆ "ಆಕ್ಸಿಟೊಸಿನ್ ಇಂಜೆಕ್ಷನ್" ನೀಡುತ್ತಿರುವ ಕುರಿತು

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೩೨ (೭೬) ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಹೆಚ್ಚು ಹಾಲು ಉತ್ಪಾದಿಸಬಹುದು ಎಂದು ನಂಬಿಸಿ ಕಾನೂನು ಬಾಹಿರವಾಗಿ ರೈತರ ಹಸುಗಳಿಗೆ "ಆಕ್ಸಿಟೊಸಿನ್ ಇಂಜೆಕ್ಷನ್" ನೀಡುತ್ತಿರುವ ಮತ್ತು ಅನಧಿಕೃತವಾಗಿ ಮಾರುತ್ತಿರುವ ಜಾಲ ರಾಜ್ಯದಲ್ಲಿ ಅವ್ಯಾಹತವಾಗಿ ಅಕೃತ್ಯವೆಸಗುತ್ತಿರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, 'ಆಕ್ಸಿಟೊಸಿನ್ ಇಂಜೆಕ್ಷನ್' ಅನಧಿಕೃತವಾಗಿ ಮಾರಾಟ ಮಾಡುತ್ತಿರುವುದನ್ನು ತಪ್ಪಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಇ) ಈಗಾಗಲೇ ಇಂತಹ ಎಷ್ಟು ಪ್ರಕರಣಗಳನ್ನು ಪತ್ತೆ ಹಚ್ಚಲಾಗಿದೆ ; ಅಂತಹವರ ವಿರುದ್ಧ ಕೈಗೊಂಡಿರುವ ಕ್ರಮಗಳೇನು ;

(ಈ) ಈ 'ಆಕ್ಸಿಟೊಸಿನ್ ಇಂಜೆಕ್ಷನ್'ನ ಅನಧಿಕೃತ ದಂಧೆಯನ್ನು ತಡೆಗಟ್ಟಲು ಸರ್ಕಾರವು ಕೈಗೊಂಡ ದಿಟ್ಟ ಕ್ರಮಗಳೇನು ? (ವಿವರ ನೀಡುವುದು)

## ಮುಜರಾಯಿ ದೇವಸ್ಥಾನಗಳಿಂದ ಸಂಗ್ರಹವಾಗುವ ಹಣದ ಬಳಕೆಯ ಕುರಿತು

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೩೩ (೭೫) ಮಾನ್ಯ ಜವಳಿ ಹಾಗೂ ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಧಾರ್ಮಿಕ ದತ್ತಿ ಇಲಾಖೆಯಡಿ ಬರುವ ದೇವಸ್ಥಾನಗಳಲ್ಲಿ ದೇಣಿಗೆ ಹಾಗೂ ಕಾಣಿಕೆ ರೂಪದಲ್ಲಿ ಹಣ ಸಂಗ್ರಹಿಸಲಾಗುತ್ತಿದೆಯೇ;

(ಆ) ಹಾಗಿದ್ದಲ್ಲಿ, ಕಳೆದ ೩ ವರ್ಷಗಳಲ್ಲಿ ರಾಜ್ಯ ಧಾರ್ಮಿಕ ದತ್ತಿ ಇಲಾಖೆ ಅಧೀನದಲ್ಲಿರುವ ಎ ಶ್ರೇಣಿ ದೇವಾಲಯಗಳಲ್ಲಿ ದೇಣಿಗೆ ಕಾಣಿಕೆ ರೂಪದಲ್ಲಿ ಸಂಗ್ರಹವಾಗಿರುವ ಒಟ್ಟು ಹಣವೆಷ್ಟು ; (ದೇವಸ್ಥಾನವಾರು ಸಂಗ್ರಹವಾದ ಮೊತ್ತದ ವಿವರ ನೀಡುವುದು)

(ಇ) ಈ ರೀತಿ ಭಕ್ತಾದಿಗಳ ದೇಣಿಗೆಯಿಂದ ಸಂಗ್ರಹವಾದ ಹಣವನ್ನು ಯಾವ ರೀತಿಯ ಚಟುವಟಿಕೆಗಳಿಗೆ ಉಪಯೋಗಿಸಲಾಗಿದೆ ; ಚಟುವಟಿಕೆವಾರು ವಿನಿಯೋಗಿಸಲಾದ ಹಣದ ವಿವರ ನೀಡುವುದು;

(ಈ) ಸಂಗ್ರಹವಾದ ದೇಣಿಗೆಯಿಂದ ರಾಜ್ಯದಲ್ಲಿರುವ ದೇವಸ್ಥಾನಗಳ ಪುನರುತ್ಥಾನದ/ಜೀರ್ಣೋದ್ಧಾರದ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗಿದೆಯೇ ; (ವಿವರ ನೀಡುವುದು)

(ಉ) ಧಾರ್ಮಿಕ ದತ್ತಿ ಇಲಾಖೆಯ ಅಧೀನದಲ್ಲಿರುವ ದೇವಸ್ಥಾನಗಳ ಅರ್ಚಕ ಸಿಬ್ಬಂದಿಗಳಿಗೆ ಯಾವ ಸೇವಾ ಸೌಲಭ್ಯಗಳನ್ನು ನೀಡಲಾಗುತ್ತಿದೆ ? (ವಿವರ ನೀಡುವುದು)

## ಬೆಳಗಾವಿ ಜಿಲ್ಲೆಯ ಕೃಷಿ ಮಾರುಕಟ್ಟೆ ಸಮಿತಿಗಳಲ್ಲಿ ಅವಶ್ಯ ಮೂಲಭೂತ ಸೌಕರ್ಯಗಳ ಕೊರತೆ ಬಗ್ಗೆ

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೩೪ (೭೭) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಳಗಾವಿ ಜಿಲ್ಲೆಯಲ್ಲಿರುವ ಕೃಷಿ ಮಾರುಕಟ್ಟೆ ಸಮಿತಿಗಳಲ್ಲಿ ಮೂಲ ಸೌಕರ್ಯಗಳಿಲ್ಲದೆ ರೈತರಿಗೆ ಮತ್ತು ವರ್ತಕರಿಗೆ ಆಗುತ್ತಿರುವ ತೊಂದರೆಗಳು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಹಾಗಿದ್ದಲ್ಲಿ, ಈ ಕುರಿತು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು; (ವಿವರ ನೀಡುವುದು)

(ಇ) ಬೆಳಗಾವಿ ಜಿಲ್ಲಾ ಮಟ್ಟದ ಮಾರುಕಟ್ಟೆಯಲ್ಲಿ ಅವಶ್ಯ ಮೂಲ ಸೌಲಭ್ಯಗಳಾದ ಕುಡಿಯುವ ನೀರು, ಶೌಚಾಲಯದ ವ್ಯವಸ್ಥೆ, ರೈತರಿಗೆ ವಿಶ್ರಾಂತಿ ತಾಣಗಳ ವ್ಯವಸ್ಥೆ, ಸ್ವಚ್ಛತೆಯ ನಿರ್ವಹಣೆಯ ಬಗ್ಗೆ ಸರ್ಕಾರ ತೆಗೆದುಕೊಂಡ ಕ್ರಮಗಳೇನು ; ಗುಂಡಿ ಬಿದ್ದಿರುವ ರಸ್ತೆಗಳನ್ನು ದುರಸ್ಥಿ ಪಡಿಸಲು ಸರ್ಕಾರವು ತಕ್ಷಣವೇ ಕ್ರಮ ವಹಿಸುವುದೇ ;

(ಈ) ರಾಜ್ಯದ ಎಷ್ಟು ಕೃಷಿ ಮಾರುಕಟ್ಟೆಗಳಲ್ಲಿ ಡಿಜಿಟಲ್ ತೂಕಯಂತ್ರವನ್ನು ಅಳವಡಿಸಲಾಗಿದೆ ; (ಈ ಬಗ್ಗೆ ಜಿಲ್ಲಾವಾರು ಮಾಹಿತಿ ನೀಡುವುದು)

(ಉ) ಬೆಳಗಾವಿ ಜಿಲ್ಲೆಯಲ್ಲಿ ಯಾವ ಯಾವ ಮಾರುಕಟ್ಟೆಗಳಲ್ಲಿ ಡಿಜಿಟಲ್ ತೂಕದ ಯಂತ್ರಗಳನ್ನು ಸ್ಥಾಪಿಸಲಾಗಿದೆ? (ಮಾಹಿತಿ ನೀಡುವುದು)

## ಮಲೇಷ್ಯಾದಿಂದ ಮರಳನ್ನು ಆಮದು ಮಾಡಿಕೊಳ್ಳುತ್ತಿರುವ ಬಗ್ಗೆ

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೩೫ (೭೯) ಮಾನ್ಯ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿನ ಮರಳಿನ ಅಭಾವವನ್ನು ನೀಗಿಸಲು ಸರ್ಕಾರವು ಮಲೇಷ್ಯಾದಿಂದ ಮರಳನ್ನು ಖರೀದಿಸಿ ಸಾರ್ವಜನಿಕರಿಗೆ ವಿತರಿಸುತ್ತಿರುವುದು ನಿಜವೇ;

(ಆ) ಸಾರ್ವಜನಿಕರ ಬೇಡಿಕೆಗೆ ಅನುಗುಣವಾಗಿ ಮರಳನ್ನು ಪೂರೈಸಲು ಸರ್ಕಾರವು ಯಾವ ಯಾವ ಕ್ರಮಗಳನ್ನು ಕೈಗೊಂಡಿದೆ;

(ಇ) ಪ್ರಸ್ತುತ ಸಾರ್ವಜನಿಕರಿಂದ ಬಂದಿರುವ ಮರಳಿನ ಬೇಡಿಕೆ ಎಷ್ಟು; ಸದ್ಯ ಸರ್ಕಾರವು ಮಲೇಷ್ಯಾದಿಂದ ಎಷ್ಟು ಟನ್ ಮರಳನ್ನು ಆಮದು ಮಾಡಿಕೊಂಡಿದೆ;

(ಈ) ಸರ್ಕಾರವು ಮರಳನ್ನು ಆಮದು ಮಾಡಿಕೊಂಡ ಪ್ರತಿ ಟನ್ನಿನ ಬೆಲೆ ಎಷ್ಟು; ಸರ್ಕಾರವು ಸಾರ್ವಜನಿಕರಿಗೆ ಈ ಮರಳನ್ನು ಯಾವ ದರದಲ್ಲಿ ವಿತರಿಸಲಾಗುತ್ತಿದೆ; (ವಿವರ ನೀಡುವುದು)

(ಉ) ಸಾರ್ವಜನಿಕರಿಗೆ ಮರಳನ್ನು ವಿತರಿಸಲು ಸರ್ಕಾರವು ಅನುಸರಿಸುವ ನಿಯಮಗಳೇನು; ಮರಳನ್ನು ವಿತರಿಸಲು ಮತ್ತು ಪಡೆಯಲು ಯಾರು ಅರ್ಹರು; ಇದಕ್ಕಿರುವ ಮಾನದಂಡಗಳೇನು?

## ಲೋಕೋಪಯೋಗಿ ಇಲಾಖೆ ಕೈಗೊಂಡ ಕಾಮಗಾರಿಗಳ ಬಗ್ಗೆ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು):–**

೩೬ (೮೦) ಮಾನ್ಯ ಲೋಕೋಪಯೋಗಿ ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ನಾಲ್ಕು ವರ್ಷಗಳಿಂದ ಬೆಳಗಾವಿ ದಕ್ಷಿಣ ಮತ ಕ್ಷೇತ್ರದಲ್ಲಿ ಲೋಕೋಪಯೋಗಿ ಇಲಾಖೆಯಿಂದ ಕೈಗೊಂಡ ಕಾಮಗಾರಿಗಳು ಯಾವುವು;

(ಆ) ಯಾವ ಯಾವ ಲೆಕ್ಕ ಶೀರ್ಷಿಕೆಗಳಡಿ ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ; ಆ ಪೈಕಿ ಪೂರ್ಣಗೊಂಡು ಗುತ್ತಿಗೆದಾರರಿಗೆ ಹಣ ಪಾವತಿಯಾಗದೆ ಬಾಕಿಯಿರುವ ಬಿಲ್ಲುಗಳ ಮೊತ್ತವೆಷ್ಟು; (ಲೆಕ್ಕ ಶೀರ್ಷಿಕೆವಾರು ಮತ್ತು ಕಾಮಗಾರಿವಾರು ವಿವರಗಳನ್ನು ನೀಡುವುದು)

(ಇ) ಕಳೆದ ಮೂರು ವರ್ಷಗಳಿಂದ ಗುತ್ತಿಗೆದಾರರಿಗೆ ಬಿಡುಗಡೆ ಮಾಡಿರುವ ಕಾಮಗಾರಿಗಳ ಬಿಲ್ಲುಗಳ ಮೊತ್ತವೆಷ್ಟು; (ವರ್ಷವಾರು ಮತ್ತು ಕಾಮಗಾರಿಗಳವಾರು ಮಾಹಿತಿ ನೀಡುವುದು)

(ಈ) ಪ್ರಸ್ತುತ ಈಗ ಖರ್ಚಾಗದೆ ಉಳಿದಿರುವ ಮೊತ್ತವೆಷ್ಟು ? (ವಿವರಗಳನ್ನು ನೀಡುವುದು)

## ಕೃಷಿ ಭಾಗ್ಯ ಯೋಜನೆಯ ಅನುಷ್ಠಾನದ ಬಗ್ಗೆ

**ಶ್ರೀಮತಿ ಮೋಟಮ್ಮ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೩೭ (೧೩) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಚಿಕ್ಕಮಗಳೂರು ಜಿಲ್ಲೆಯಲ್ಲಿ ಕೃಷಿ ಭಾಗ್ಯ ಯೋಜನೆಯು ಅನುಷ್ಠಾನಗೊಳಿಸಲಾಗಿದೆಯೇ; ಹಾಗಿದ್ದಲ್ಲಿ ವಿವರ ನೀಡುವುದು;

(ಆ) ಈ ಯೋಜನೆಯ ಪ್ರಯೋಜನ ಪಡೆದಿರುವ ಫಲಾನುಭವಿಗಳ ಸಂಖ್ಯೆ ಎಷ್ಟು; ವರ್ಗವಾರು ವಿವರ ನೀಡುವುದು;

(ಇ) ಕೃಷಿ ಭಾಗ್ಯ ಯೋಜನೆಯನ್ನು ಮಳೆ ಆಶ್ರಿತ ಕಾಫಿ ಬೆಳೆಗಾರರಿಗೆ ಅನ್ವಯವಾಗುವಂತೆ ಯೋಜನೆ ರೂಪಿಸುವ ಬಗ್ಗೆ ಸರ್ಕಾರ ಚಿಂತನೆ ನಡೆಸಿದೆಯೇ;

(ಈ) ಮಲೆನಾಡು ಪ್ರದೇಶದಲ್ಲಿನ ಬೆಳೆಗಾರರು (ಮಳೆ ಆಶ್ರಿತ) ಈ ಯೋಜನೆಯಿಂದ ವಂಚಿತರಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

## ವಿದ್ಯುತ್ ಮಗ್ಗಗಳಿಗೆ ನೀಡುತ್ತಿರುವ ಸಹಾಯಧನ ಕುರಿತು

**ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೩೮ (೪೧) ಮಾನ್ಯ ಜವಳಿ ಹಾಗೂ ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸರ್ಕಾರದ ಅಧೀನದಲ್ಲಿರುವ ಜವಳಿ ಉದ್ಯಮಿಗಳಿಗೆ ವಿದ್ಯುತ್ ಮಗ್ಗಗಳನ್ನು ಸ್ಥಾಪಿಸಲು ಸರ್ಕಾರ ನೀಡುತ್ತಿರುವ ಸಹಾಯ ಧನ ಎಷ್ಟು ;

(ಆ) ಸಹಾಯ ಧನ ನೀಡಲು ಇರುವ ಮಾನದಂಡಗಳೇನು;

(ಇ) ಯಾವ ಯಾವ ಜಿಲ್ಲೆಯಲ್ಲಿ ಹೆಚ್ಚಿನ ಪ್ರಮಾಣದಲ್ಲಿ ವಿದ್ಯುತ್ ಮಗ್ಗಗಳನ್ನು ಉಪಯೋಗಿಸಲಾಗುತ್ತಿದೆ?

## ಕೃಷಿ ಹೊಂಡಗಳ ಬಗ್ಗೆ

**ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೩೯ (೪೦) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ಮೂರು ವರ್ಷಗಳಲ್ಲಿ ಬೆಂಗಳೂರು ನಗರ ಮತ್ತು ಗ್ರಾಮಾಂತರ ಜಿಲ್ಲಾ ಪಂಚಾಯಿತಿ ವ್ಯಾಪ್ತಿಯಲ್ಲಿ ಎಷ್ಟು ಕೃಷಿ ಹೊಂಡಗಳನ್ನು ನಿರ್ಮಿಸಲಾಗಿದೆ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ೨೦೧೭-೧೮ನೇ ಸಾಲಿನಲ್ಲಿ ಇನ್ನೂ ಎಷ್ಟು ಕೃಷಿ ಹೊಂಡಗಳನ್ನು ನಿರ್ಮಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆ ?

## ರಾಜ್ಯದಲ್ಲಿನ ಹೌಸಿಂಗ್ ಸಹಕಾರ ಸಂಘಗಳ ಬಗ್ಗೆ

**ಶ್ರೀ ಬಿ.ಜೆ ಪುಟ್ಟಸ್ವಾಮಿ (ವಿಧಾನ ಸಭೆಯಿಂದ ಚುನಾಯಿತರಾದವರು) :-**

೪೦ (೭೧) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕರ್ನಾಟಕ ರಾಜ್ಯದಲ್ಲಿ ಇರುವ ಹೌಸಿಂಗ್ ಸಹಕಾರ ಸಂಘಗಳ ಸಂಖ್ಯೆ ಎಷ್ಟು ;

(ಆ) ಸಾರ್ವಜನಿಕರಿಗಾಗಿ ನಿಯಮದಂತೆ ಕಾರ್ಯನಿರ್ವಹಿಸುತ್ತಿರುವ ಹೌಸಿಂಗ್ ಸಹಕಾರ ಸಂಘಗಳ ಸಂಖ್ಯೆ ಎಷ್ಟು; ಕಾನೂನು ಬಾಹಿರವಾಗಿ ಸಾರ್ವಜನಿಕರಿಂದ ನಿವೇಶನಕ್ಕೆ ಹಣ ಪಡೆದು ಬೈಲಾ ಪ್ರಕಾರ ನಿವೇಶನ ಹಂಚಿಕೆ ಮಾಡದಿರುವ ಹೌಸಿಂಗ್ ಸಹಕಾರ ಸಂಘಗಳ ಸಂಖ್ಯೆ ಎಷ್ಟು ; ೨೦೧೩-೧೪ ರಿಂದ ೨೦೧೭-೧೮ ರವರೆಗೆ ಸಂಪೂರ್ಣ ವಿವರ ನೀಡುವುದು;

(ಇ) ಕೇಂದ್ರ ಸರ್ಕಾರ ಇತ್ತೀಚೆಗೆ ಜಾರಿ ಮಾಡಿರುವ ನಿಯಮದಂತೆ ಎಷ್ಟು ಸಂಘಗಳ ವಿರುದ್ಧ ಕ್ರಮ ಜರುಗಿಸಲಾಗಿದೆ; ಕ್ರಮ ಜರುಗಿಸಬೇಕಾಗಿರುವ ಬಾಕಿ ಸಂಘಗಳು ಎಷ್ಟು ?

## ರೈತರ ಆತ್ಮಹತ್ಯೆಯ ಬಗ್ಗೆ

**ಶ್ರೀ ಬಿ.ಜೆ ಪುಟ್ಟಸ್ವಾಮಿ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೪೧ (೯೦) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ರೈತರು ಆತ್ಮಹತ್ಯೆ ಮಾಡಿಕೊಳ್ಳುತ್ತಿರುವುದು ನಿಜವೇ;

(ಆ) ಹಾಗಿದ್ದರೆ, ರಾಜ್ಯದಲ್ಲಿ ೨೦೧೩–೧೪ ರಿಂದ ೨೦೧೭–೧೮ ರವರೆಗೆ ಆತ್ಮಹತ್ಯೆ ಮಾಡಿಕೊಂಡ ರೈತರ ಸಂಖ್ಯೆ ಎಷ್ಟು; ಆತ್ಮಹತ್ಯೆ ಮಾಡಿಕೊಂಡ ರೈತರ ಕುಟುಂಬಗಳಿಗೆ ಸರ್ಕಾರದ ವತಿಯಿಂದ ಪರಿಹಾರ ನೀಡಲಾದ ಕುಟುಂಬಗಳ ಸಂಖ್ಯೆ ಮತ್ತು ಮೊತ್ತ ಎಷ್ಟು; (ವಿವರವನ್ನು ವರ್ಷಾವಾರು ನೀಡುವುದು)

(ಇ) ರೈತರ ಆತ್ಮಹತ್ಯೆಗಳನ್ನು ತಡೆಯಲು ಸರ್ಕಾರ ತೆಗೆದುಕೊಂಡಿರುವ ಮುಂಜಾಗ್ರತ ಕ್ರಮಗಳೇನು ? (ವಿವರ ನೀಡುವುದು)

## ರೈತರ ಅಭಿವೃದ್ಧಿಗೆ ಸರ್ಕಾರದ ಯೋಜನೆಗಳ ಬಗ್ಗೆ

**ಶ್ರೀ ಬಿ.ಜೆ. ಪುಟ್ಟಸ್ವಾಮಿ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೪೨ (೭೦) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೃಷಿ ಇಲಾಖೆಯಿಂದ ರೈತರ ಅಭಿವೃದ್ಧಿಗೆ ಸರ್ಕಾರ ವಿವಿಧ ಯೋಜನೆಗಳನ್ನು ಕೈಗೊಂಡಿರುವುದು ನಿಜವೇ;

(ಆ) ಹಾಗಿದ್ದರೆ, ಅಂತಹ ಯೋಜನೆಗಳು ಯಾವುವು; ಆ ಯೋಜನೆಗಳಿಗೆ ಆಯವ್ಯಯದಲ್ಲಿ ನಿಗಧಿಪಡಿಸಿದ ಹಣ ಎಷ್ಟು; ಖರ್ಚು ಮಾಡಿದ ಹಣ ಎಷ್ಟು; ೨೦೧೩–೧೪ ರಿಂದ ೨೦೧೭–೧೮ ರವರೆಗೆ ವರ್ಷಾವಾರು, ಫಲಾನುಭವಿಗಳ ಸಂಖ್ಯೆ ಸಹಿತ ಮಾಹಿತಿ ನೀಡುವುದು;

(ಇ) ಅಂತಹ ಯೋಜನೆಗಳಿಗೆ ಕೇಂದ್ರ ಸರ್ಕಾರದ ಅನುದಾನ ಎಷ್ಟು; ರಾಜ್ಯ ಸರ್ಕಾರದ ಅನುದಾನ ಎಷ್ಟು? (೨೦೧೩-೧೪ ರಿಂದ ೨೦೧೭-೧೮ ರವರೆಗೆ ವರ್ಷಾವಾರು ವಿವರ ನೀಡುವುದು)

## ಕೃಷಿ ಭಾಗ್ಯ ಯೋಜನೆಯ ಬಗ್ಗೆ

**ಶ್ರೀ ಬಿ.ಜೆ. ಪುಟ್ಟಸ್ವಾಮಿ (ವಿಧಾನ ಸಭೆಯಿಂದ ಚುನಾಯಿತರಾದವರು) :-**

೪೩ (೭೨) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಸರ್ಕಾರ ರೈತರ ಅಭಿವೃದ್ಧಿಗಾಗಿ "ಕೃಷಿ ಭಾಗ್ಯ" ಯೋಜನೆಯನ್ನು ಜಾರಿಗೆ ತಂದಿರುವುದು ನಿಜವೇ;

(ಆ) ಹಾಗಿದ್ದರೆ, ರೈತರ ಅಭಿವೃದ್ಧಿಗೆ ಸರ್ಕಾರ ಜಾರಿ ಮಾಡಿರುವ ಯೋಜನೆಗಳಾವುವು;

(ಇ) ೨೦೧೩-೧೪ ರಿಂದ ಇದುವರೆವಿಗೆ ಈ ಯೋಜನೆಗಳಿಗೆ ಆಯವ್ಯಯದಲ್ಲಿ ನಿಗಧಿ ಮಾಡಿದ ಹಣ ಎಷ್ಟು; ಖರ್ಚು ಮಾಡಿದ ಹಣ ಎಷ್ಟು; ಫಲಾನುಭವಿಗಳ ಸಂಖ್ಯೆ ಎಷ್ಟು; ಈ ಯೋಜನೆಗಳಿಗೆ ಕೇಂದ್ರ ಸರ್ಕಾರದ ಅನುದಾನ ಎಷ್ಟು; ರಾಜ್ಯ ಸರ್ಕಾರದ ಅನುದಾನ ಎಷ್ಟು ? (೨೦೧೩-೧೪, ೨೦೧೪-೧೫, ೨೦೧೫-೧೬, ೨೦೧೬-೧೭ ಮತ್ತು ೨೦೧೭-೧೮ ರವರೆಗೆ ಯೋಜನಾವಾರು, ವರ್ಷವಾರು ಮತ್ತು ಫಲಾನುಭವಿಗಳ ಸಂಖ್ಯೆ ಸಹಿತ ವಿವರ ನೀಡುವುದು)

## ಪ್ರಧಾನ ಮಂತ್ರಿ ಫಸಲ್ ಭೀಮಾ (ವಿಮಾ) ಯೋಜನೆಯ ಬಗ್ಗೆ

**ಶ್ರೀ ಬಿ.ಜೆ. ಪುಟ್ಟಸ್ವಾಮಿ (ವಿಧಾನ ಸಭೆಯಿಂದ ಚುನಾಯಿತರಾದವರು) :-**

೪೪ (೭೩) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ "ಪ್ರಧಾನ ಮಂತ್ರಿ ಫಸಲ್ ಭೀಮಾ (ವಿಮಾ) ಯೋಜನೆ" ಜಾರಿಯಲ್ಲಿರುವುದು ನಿಜವೇ;

(ಆ) ಹಾಗಿದ್ದರೆ, ಯೋಜನೆಯ ಪ್ರಾರಂಭದಿಂದ ಇದುವರೆವಿಗೆ ಈ ಯೋಜನೆಯಡಿಯಲ್ಲಿ ಲಾಭ ಪಡೆದ ಫಲಾನುಭವಿಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು, ವರ್ಷವಾರು ಮತ್ತು ಫಲಾನುಭವಿಗಳ ಸಂಖ್ಯೆ ಸಹಿತ ವಿವರ ನೀಡುವುದು)

(ಇ) ಯೋಜನೆಯ ಲಾಭ ಪಡೆಯಲು ಇರುವ ಮಾನದಂಡವೇನು; ಈ ಯೋಜನೆಗೆ ಕೇಂದ್ರ ಸರ್ಕಾರದ ಪಾಲು ಎಷ್ಟು; ರಾಜ್ಯ ಸರ್ಕಾರದ ಪಾಲು ಎಷ್ಟು ; ಸಂಪೂರ್ಣ ವಿವರ ನೀಡುವುದು?

## ರೈತರ ಜನಸಂಪರ್ಕ ಸಭೆಯನ್ನು ಆಯೋಜಿಸುವ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೪೫ (೧೮೪) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ಮೂರು ವರ್ಷಗಳಲ್ಲಿ ಉಡುಪಿ ಜಿಲ್ಲೆಯ ಕೃಷಿ ಬೆಳೆ ಆವರಿಸಿದ ಜಮೀನಿನ ವಿಸ್ತೀರ್ಣವೆಷ್ಟು; (ವರ್ಷವಾರು, ತಾಲ್ಲೂಕುವಾರು, ಬೆಳೆವಾರು ವಿವರ ನೀಡುವುದು)

(ಆ) ವರ್ಷದಿಂದ ವರ್ಷಕ್ಕೆ ರೈತರು ಜಿಂಕೆ, ಕಾಡು ಕೋಣ, ಹಂದಿ ಮುಂತಾದ ಕಾಡುಪ್ರಾಣಿಗಳ ಹಾವಳಿಯಿಂದ ಕೃಷಿಯನ್ನು ಹಾಗೂ ಮಂಗನ ಹಾವಳಿಯಿಂದ ಅಡಿಕೆ, ಗೇರು, ತೆಂಗು, ಮುಂತಾದ ತೋಟಗಾರಿಕಾ ಬೆಳೆಯನ್ನು ರಕ್ಷಿಸಲಾಗದೇ ಸಮಸ್ಯೆಯನ್ನು

ಎದುರಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹೌದಾದಲ್ಲಿ ಕೃಷಿಯನ್ನು ಉತ್ತೇಜಿಸಲು ಸರ್ಕಾರದಿಂದ ಕೈಗೊಂಡ ಕ್ರಮಗಳೇನು;

(ಇ) ರೈತರು ತಮ್ಮ ಕೃಷಿಯಲ್ಲಿ ಅನುಭವಿಸುತ್ತಿರುವ ತೊಂದರೆಗಳನ್ನು ಮತ್ತು ಪಡೆದ ಅನುಭವಗಳನ್ನು ಸರ್ಕಾರದ ವಿವಿಧ ಪ್ರೋತ್ಸಾಹದಾಯಕ ಯೋಜನೆಯ ಮಾಹಿತಿಯನ್ನು ಪಡೆಯಲು ಅನುಕೂಲವಾಗುವಂತೆ ಪ್ರತಿ ೬ ತಿಂಗಳಿಗೊಮ್ಮೆ ತಾಲ್ಲೂಕು ಮಟ್ಟದ ರೈತ ಜನಸಂಪರ್ಕ ಸಭೆಯನ್ನು ನಡೆಸುವ ಯೋಜನೆ ಸರ್ಕಾರದ ಮುಂದಿದೆಯೇ; ಇಲ್ಲವಾದಲ್ಲಿ ಆರ್ಥಿಕವಾಗಿ ಹೊರೆಯಾಗದ ರೈತ ಜನಸಂಪರ್ಕ ಸಭೆಯನ್ನು ನಡೆಸಲು ಇರುವ ತೊಡಕುಗಳೇನು; ಹೌದಾದಲ್ಲಿ ಈ ಬಗ್ಗೆ ಯಾವ ಕಾಲಮಿತಿಯಲ್ಲಿ ಆದೇಶ ಹೊರಡಿಸಲಾಗುವುದು?

## ಸೂರ್ಯ ರೈತ ಮತ್ತು ಸೌರ ಫಲಕಗಳ ಮೂಲಕ ವಿದ್ಯುತ್ ಉತ್ಪಾದನೆ ಯೋಜನೆ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೪೬ (೧೮೫) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯ ಸರ್ಕಾರದ ಸೂರ್ಯ ರೈತ ಯೋಜನೆಯಲ್ಲಿ ಫಲಾನುಭವಿಗಳಾಗಿರುವ ರೈತರ ಸಂಖ್ಯೆ ಎಷ್ಟು; (ಜಿಲ್ಲಾವಾರು ವಿವರ ನೀಡುವುದು)

(ಆ) ಸೂರ್ಯ ರೈತ ಯೋಜನೆಯ ಮಾರ್ಗಸೂಚಿ ಮತ್ತು ಮಾನದಂಡಗಳೇನು; ಈ ಯೋಜನೆಯಲ್ಲಿ ಯಾವುದೇ ಗುರಿ ನಿಗದಿಪಡಿಸಲಾಗಿದೆಯೇ; ನಿಗದಿಪಡಿಸಿದ್ದರೆ, ವಿವರ ಒದಗಿಸುವುದು;

(ಇ) ರಾಜ್ಯದಲ್ಲಿ ಕಟ್ಟಡದ ಮೇಲ್ಛಾವಣಿಯ ಮೇಲೆ ಸೌರಫಲಕ ಅಳವಡಿಸಿ ಗ್ರೀಡ್ ಗೆ ವಿದ್ಯುತ್ ಒದಗಿಸುವ ಯೋಜನೆಯ ಫಲಾನುಭವಿಗಳ ಸಂಖ್ಯೆ ಎಷ್ಟು ? (ಜಿಲ್ಲಾವಾರು ವಿವರ ನೀಡುವುದು)

## ತೆಂಗು ಬೆಳೆಯನ್ನು ರೋಗದಿಂದ ರಕ್ಷಿಸುವ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೪೭ (೧೮೬) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಉಡುಪಿ ಜಿಲ್ಲೆಯಲ್ಲಿ ತೆಂಗು ಬೆಳೆ ಆವರಿಸಿದ ಜಮೀನಿನ ವಿಸ್ತೀರ್ಣವೆಷ್ಟು; (ತಾಲ್ಲೂಕುವಾರು ವಿವರ ನೀಡುವುದು) ತೆಂಗು ಬೆಳೆಯ ಉತ್ತೇಜನಕ್ಕಾಗಿ ಸರ್ಕಾರದಿಂದ ಯಾವ ಯಾವ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ; ಮತ್ತು ಈ ಕಾರ್ಯಕ್ರಮಗಳು ನೈಜ ಫಲಾನುಭವಿಯನ್ನು ತಲುಪಲು ಇಲಾಖೆಯಿಂದ ಕೈಗೊಂಡ ಕ್ರಮಗಳು ಯಾವುವು;

(ಆ) ಉಡುಪಿ ಜಿಲ್ಲೆಯಲ್ಲಿ ತೆಂಗು ಬೆಳೆಯು ಯಾವ ಯಾವ ರೋಗದಿಂದ ಭಾದಿತವಾಗಿದೆ; ಇದಕ್ಕೆ ಇಲಾಖೆಯಿಂದ ಗುರುತಿಸಲಾದ ಕಾರಣಗಳು ಯಾವುವು; ಕಳೆದ ೩ ವರ್ಷಗಳಲ್ಲಿ ಉಡುಪಿ ಜಿಲ್ಲೆಯ ರೈತರು ತೆಂಗು ಬೆಳೆ ರೋಗದಿಂದ ಅನುಭವಿಸಿರುವ ನಷ್ಟವೆಷ್ಟು; ಈ ಬಗ್ಗೆ ಸರ್ಕಾರದಿಂದ ಪರಿಹಾರವನ್ನು ನೀಡಲಾಗಿದೆಯೇ; (ವರ್ಷವಾರು, ತಾಲ್ಲೂಕುವಾರು ವಿವರ ನೀಡುವುದು)

(ಇ) ಈ ರೋಗಗಳಿಂದ ತೆಂಗಿನ ಮರಗಳು ಸಾಯುತ್ತಿರುವುದು ಮತ್ತು ಅವುಗಳ ಇಳುವರಿ ಕಡಿಮೆಯಾಗುವುದನ್ನು ತಪ್ಪಿಸಲು ಸರ್ಕಾರದಿಂದ ಕೈಗೊಂಡ ಕ್ರಮಗಳಾವುವು ?

## ಕೃಷಿ ಬೆಳೆ ರಕ್ಷಣೆಗೆ ಕೃಷಿ ಗೋದಾಮು ನಿರ್ಮಾಣ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೪೮ (೧೮೭) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ರೈತರ ಕೃಷಿ ಬೆಳೆಗಳನ್ನು ದಾಸ್ತಾನು ಮಾಡಲು ಅನುಕೂಲವಾಗುವಂತೆ ಇರುವ ಸರ್ಕಾರಿ ಗೋದಾಮುಗಳ ಮತ್ತು ಶೈತ್ಯಾಗಾರಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಕೃಷಿ ಬೆಳೆಗೆ ಅನುಗುಣವಾಗಿ ಗೋದಾಮುಗಳ ಸಂಖ್ಯೆ ಇಲ್ಲದಿರುವುದನ್ನು ಸರ್ಕಾರ ಗಮನಿಸಿದೆಯೇ; ಈ ಗೋದಾಮುಗಳ ನಿರ್ಮಾಣಕ್ಕೆ ಇರುವ ಮಾನದಂಡವೇನು; (ಮಾರ್ಗಸೂಚಿಯ ಪ್ರತಿ ಒದಗಿಸುವುದು)

(ಇ) ರೈತರು ಬೆಳೆದ ಬೆಳೆಯು ಮಾರುಕಟ್ಟೆಯನ್ನು ತಲುಪುವಾಗಲೇ ಆಗುವ ಶೇ. ೪೦ ರಷ್ಟು ಬೆಳೆ ನಾಶವನ್ನು ತಪ್ಪಿಸುವ ನಿಟ್ಟಿನಲ್ಲಿ ಸಹಕಾರ ಸಂಘಗಳ ಮೂಲಕ ಗ್ರಾಮ ಮಟ್ಟದಲ್ಲಿ ಸಣ್ಣ ಪ್ರಮಾಣದಲ್ಲಿ ಕೃಷಿ ಗೋದಾಮುಗಳನ್ನು ಸ್ಥಾಪಿಸಲು ಇಲಾಖೆಯಿಂದ ಬಡ್ಡಿರಹಿತ ಸಾಲ ನೀಡಿ ಸಹಕಾರ ನೀಡಲಾಗುವುದೇ; ಹೌದಾದಲ್ಲಿ ಸಂಪೂರ್ಣ ವಿವರ ನೀಡುವುದು?

## ಕೃಷಿ ಮಾರುಕಟ್ಟೆಗಳ ಆದಾಯದ ಕುರಿತು

**ಶ್ರೀ ಪ್ರದೀಪ್ ಶೆಟ್ಟರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೪೯ (೧೯) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಧಾರವಾಡ, ಗದಗ ಹಾಗೂ ಹಾವೇರಿ ಜಿಲ್ಲೆಗಳ ವ್ಯಾಪ್ತಿಯಲ್ಲಿನ ವಿವಿಧ ಕೃಷಿ ಮಾರುಕಟ್ಟೆಗಳ (ಎ.ಪಿ.ಎಂ.ಸಿ.) ಮುಖಾಂತರ ಕಳೆದ ೩ ವರ್ಷಗಳಲ್ಲಿ ಸರ್ಕಾರಕ್ಕೆ ಬಂದಿರುವ ಆದಾಯವೆಷ್ಟು; (ವಿವಿಧ ಕೃಷಿ ಮಾರುಕಟ್ಟೆಗಳವಾರು, ವರ್ಷವಾರು ಸಂಪೂರ್ಣ ವಿವರ ನೀಡುವುದು)

(ಆ) ಕಳೆದ ೩ ವರ್ಷಗಳಲ್ಲಿ ಈ ಜಿಲ್ಲೆಗಳ ವಿವಿಧ ಕೃಷಿ ಮಾರುಕಟ್ಟೆಗಳ ಅಭಿವೃದ್ಧಿಗಾಗಿ ಖರ್ಚು ಮಾಡಿರುವ ಅನುದಾನವೆಷ್ಟು; (ವಿವಿಧ ಕೃಷಿ ಮಾರುಕಟ್ಟೆಗಳವಾರು, ವರ್ಷವಾರು ಸಂಪೂರ್ಣ ವಿವರ ನೀಡುವುದು)

(ಇ) ೨೦೧೬–೧೭ನೇ ಸಾಲಿನಲ್ಲಿ ಈ ಜಿಲ್ಲೆಗಳಲ್ಲಿ ನಬಾರ್ಡ್ ಯೋಜನೆಯಡಿ ವಿವಿಧ ಕೃಷಿ ಮಾರುಕಟ್ಟೆಗಳಿಗೆ ನೀಡಿರುವ ಅನುದಾನ ಎಷ್ಟು ?(ವಿವಿಧ ಕೃಷಿ ಮಾರುಕಟ್ಟೆಗಳವಾರು ವಿವರ ನೀಡುವುದು)

## ಲೋಕೋಪಯೋಗಿ ಇಲಾಖೆಯಿಂದ ನಿರ್ಮಾಣವಾದ ರಸ್ತೆಗಳ ಬಗ್ಗೆ

**ಶ್ರೀ ಪ್ರದೀಪ್ ಶೆಟ್ಟರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೦ (೨೦) ಮಾನ್ಯ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಧಾರವಾಡ, ಗದಗ ಹಾಗೂ ಹಾವೇರಿ ಜಿಲ್ಲೆಗಳ ವ್ಯಾಪ್ತಿಯಲ್ಲಿ ಕಳೆದ ೩ ವರ್ಷಗಳಲ್ಲಿ ಲೋಕೋಪಯೋಗಿ ಇಲಾಖೆಯಿಂದ ಯಾವ ಯಾವ ಹೊಸ ರಸ್ತೆಗಳ ನಿರ್ಮಾಣ ಮಾಡಲಾಗಿದೆ ; (ತಾಲ್ಲೂಕುವಾರು, ವರ್ಷಾವಾರು ಸಂಪೂರ್ಣ ವಿವರ ನೀಡುವುದು)

(ಆ) ಕಳೆದ ೩ ವರ್ಷಗಳಲ್ಲಿ ಇದಕ್ಕೆ ಖರ್ಚಾಗಿರುವ ಹಣವೆಷ್ಟು ; (ರಸ್ತೆವಾರು, ವರ್ಷಾವಾರು ವಿವರ ನೀಡುವುದು)

(ಇ) ಈ ಜಿಲ್ಲೆಗಳಲ್ಲಿ ಕಳೆದ ೩ ವರ್ಷಗಳಲ್ಲಿ ಯಾವ ಯಾವ ಗುಂಡಿ ಬಿದ್ದ ರಸ್ತೆಗಳ ದುರಸ್ಥಿ ಮಾಡಲಾಗಿದೆ ; ಇದಕ್ಕೆ ಖರ್ಚು ಮಾಡಿರುವ ಹಣವೆಷ್ಟು ; (ವರ್ಷಾವಾರು ಸಂಪೂರ್ಣ ವಿವರ ನೀಡುವುದು)

(ಈ) ಈ ಜಿಲ್ಲೆಗಳಲ್ಲಿ ಯಾವ ಯಾವ ರಸ್ತೆಗಳನ್ನು ನಿರ್ಮಿಸಲು ಈವರೆಗೆ ಕ್ರಿಯಾ ಯೋಜನೆಯನ್ನು ತಯಾರಿಸಲಾಗಿವೆ ; (ಸಂಪೂರ್ಣ ವಿವರ ನೀಡುವುದು)

(ಉ) ಕಳೆದ ೩ ವರ್ಷಗಳಿಂದ ಈವರೆಗೆ ಎಷ್ಟು ಕ್ರಿಯಾ ಯೋಜನೆಗಳು ಅನುಮೋದನೆಗೊಂಡಿವೆ ? (ವರ್ಷಾವಾರು ಸಂಪೂರ್ಣ ವಿವರ ನೀಡುವುದು)

## ತೋಟಗಾರಿಕೆ ಇಲಾಖೆಯ ಅನುದಾನದ ಕುರಿತು

**ಶ್ರೀ ಪ್ರದೀಪ್ ಶೆಟ್ಟರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೧ (೧೬) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಧಾರವಾಡ, ಗದಗ ಹಾಗೂ ಹಾವೇರಿ ಜಿಲ್ಲೆಗಳಲ್ಲಿ ತೋಟಗಾರಿಕೆ ಇಲಾಖೆಯಿಂದ ಕಳೆದ ೩ ವರ್ಷಗಳಲ್ಲಿ ಮಂಜೂರಾದ ಅನುದಾನ ಎಷ್ಟು; (ಯೋಜನೆವಾರು ವಿವರ ನೀಡುವುದು)

(ಆ) ಈ ಜಿಲ್ಲೆಗಳಿಗೆ ಮಂಜೂರಾದ ಅನುದಾನದಲ್ಲಿ ಯಾವ ಯಾವ ಕಾರ್ಯಕ್ರಮಗಳನ್ನು ೩ ವರ್ಷಗಳಲ್ಲಿ ಹಮ್ಮಿಕೊಳ್ಳಲಾಗಿವೆ ; (ಕಾರ್ಯಕ್ರಮವಾರು, ವರ್ಷಾವಾರು ಸಂಪೂರ್ಣ ವಿವರ ನೀಡುವುದು)

(ಇ) ಈ ಜಿಲ್ಲೆಗಳಲ್ಲಿ ಸದರಿ ಯೋಜನೆಗಳನ್ನು ಸಮರ್ಪಕವಾಗಿ ಅನುಷ್ಠಾನಗೊಂಡಿದೆಯೇ ? (ಫಲಾನುಭವಿಗಳವಾರು ಸಂಪೂರ್ಣ ವಿವರ ನೀಡುವುದು)

## ಪ್ರಧಾನಮಂತ್ರಿ ಕೃಷಿ ಸಿಂಚನ ಯೋಜನೆ ಬಗ್ಗೆ

**ಶ್ರೀ ಪ್ರದೀಪ್ ಶೆಟ್ಟರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೨ (೨೨) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೬–೧೭ನೇ ಸಾಲಿನಲ್ಲಿ ಧಾರವಾಡ, ಗದಗ ಹಾಗೂ ಹಾವೇರಿ ಜಿಲ್ಲೆಗಳ ವ್ಯಾಪ್ತಿಯಲ್ಲಿ ಪ್ರಧಾನಮಂತ್ರಿ ಕೃಷಿ ಸಿಂಚನ ಯೋಜನೆ (೬.ಐ) ಅಡಿಯಲ್ಲಿ ಜಲಾನಯನ ಕೃಷಿ ಇಲಾಖೆಯಿಂದ ಕೈಗೊಂಡ ಕೆರೆಗಳಾವುವು (ತಾಲ್ಲೂಕುವಾರು, ಕೆರೆಗಳವಾರು ಸಂಪೂರ್ಣ ವಿವರ ನೀಡುವುದು)

(ಆ) ಪ್ರಧಾನಮಂತ್ರಿ ಕೃಷಿ ಸಿಂಚನ ಯೋಜನೆ (ಓ.ಐ) ಅಡಿಯಲ್ಲಿ ಈವರೆಗೆ ವಿವಿಧ ಜಿಲ್ಲೆಗಳಿಗೆ ರಾಜ್ಯ ಸರ್ಕಾರ ಹಂಚಿಕೆ ಮಾಡಿರುವ ಅನುದಾನವೆಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಇ) ಈ ಪೈಕಿ ಈವರೆಗೆ ಖರ್ಚಾಗಿರುವ ಅನುದಾನವೆಷ್ಟು ; (ಜಿಲ್ಲಾವಾರು, ಕೆರೆಗಳವಾರು ವಿವರ ನೀಡುವುದು)

## ಅಭಿವೃದ್ಧಿ ಕಾಮಗಾರಿಗಳು

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು):–**

೫೩ (೫೦) ಮಾನ್ಯ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೇ:–

(ಅ) ೨೦೧೭–೧೮ನೇ ಸಾಲಿನಲ್ಲಿ ಬೀದರ್ ಜಿಲ್ಲಾ ವ್ಯಾಪ್ತಿಯಲ್ಲಿ ಲೋಕೋಪಯೋಗಿ ಇಲಾಖೆ ಹಮ್ಮಿಕೊಂಡಿರುವ ಅಭಿವೃದ್ಧಿ ಯೋಜನೆಗಳು ಯಾವುವು ; ಇದರ ಒಟ್ಟು ಮೊತ್ತ ಎಷ್ಟು ;

(ಆ) ಸದರಿ ಅಭಿವೃದ್ಧಿ ಕಾಮಗಾರಿಗಳ ಪ್ರಗತಿ ಯಾವ ಹಂತದಲ್ಲಿದೆ ; ವಿಧಾನಸಭೆ ಕ್ಷೇತ್ರವಾರು ಕಾಮಗಾರಿವಾರು ಪ್ರಗತಿಯ ವಿವರ ನೀಡುವುದು ;

(ಇ) ಬಾಕಿ ಇರುವ ಕಾಮಗಾರಿಗಳನ್ನು ಯಾವ ಕಾಲಮಿತಿಯೊಳಗೆ ಮುಕ್ತಾಯಗೊಳಿಸಲಾಗುವುದು ; (ಕಾಮಗಾರಿವಾರು ವಿವರ ನೀಡುವುದು)

(ಈ) ಕಾಮಗಾರಿಗಳ ಗುಣಮಟ್ಟವನ್ನು ಮೂರನೇ ಪಾರ್ಟಿಯಿಂದ ವೀಕ್ಷಣೆ ಮಾಡಿಸಲಾಗಿದೆಯೇ ; ಹಾಗಿದ್ದರೆ, ಅವರ ಸಂಪೂರ್ಣ ಮಾಹಿತಿ ಒದಗಿಸುವುದು ;

(ಉ) ಗುಣಮಟ್ಟದ ಕಾಮಗಾರಿಗೆ ಯಾವ ಮಾದರಿಯ ಕ್ರಮ ಕೈಗೊಳ್ಳಲಾಗಿದೆ ; ಗುತ್ತಿಗೆ ನೀಡುವ ಕಾರ್ಯದಲ್ಲಿ ಯಾವ ಮಾನದಂಡ ಅನುಸರಿಸಲಾಗಿದೆ ;

(ಊ) ಗುತ್ತಿಗೆದಾರರು ಸಮಯಕ್ಕೆ ಸರಿಯಾಗಿ ಕೆಲಸ ಪೂರೈಸದಿದ್ದರೆ ಅಥವಾ ಕಳಪೆ ಕಾಮಗಾರಿ ಆಗಿದ್ದರೆ ಅಂತಹವರ ವಿರುದ್ಧ ಸರ್ಕಾರ ಕೈಗೊಂಡ ಕ್ರಮಗಳೇನು ? (ವಿವರ ನೀಡುವುದು)

## ಖಾಲಿ ಹುದ್ದೆಗಳ ನೇಮಕಾತಿ ಬಗ್ಗೆ

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು):–**

೫೪ (೨೮) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೫–೧೬ ರಿಂದ ೨೦೧೭–೧೮ನೇ ಸಾಲಿನ ಮಾಹೆಯ ಅಂತ್ಯದವರೆಗೆ ಬೀದರ್ ಜಿಲ್ಲೆಯಾದ್ಯಂತ ತೋಟಗಾರಿಕೆ ಇಲಾಖೆಯಲ್ಲಿ ಖಾಲಿ ಇರುವ ಅಧಿಕಾರಿ/ಸಿಬ್ಬಂದಿಗಳ ಸಂಖ್ಯೆ ಎಷ್ಟು ; (ವೃಂದವಾರು, ತಾಲ್ಲೂಕುವಾರು ವಿವರ ನೀಡುವುದು)

(ಆ) ಇಲಾಖೆಯಲ್ಲಿ ಖಾಲಿ ಇರುವ ಹುದ್ದೆಗಳಿಂದ ಸಾರ್ವಜನಿಕರಿಗೆ ಆಗುತ್ತಿರುವ ತೊಂದರೆ ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಖಾಲಿ ಹುದ್ದೆಗಳನ್ನು ತುಂಬಲು ಸರ್ಕಾರ ಕೈಗೊಂಡ ಕ್ರಮವೇನು ?

## ಪೌಷ್ಠಿಕ ತೋಟಗಳ ಅಭಿವೃದ್ಧಿ ಬಗ್ಗೆ

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು):–**

೫೫ (೨೭) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಹೈದ್ರಾಬಾದ್ ಕರ್ನಾಟಕ ಪ್ರದೇಶದಲ್ಲಿ ಪೌಷ್ಠಿಕ ತೋಟಗಳ ಅಭಿವೃದ್ಧಿಗಾಗಿ ಸರ್ಕಾರ ರೂಪಿಸಿರುವ ಯೋಜನೆಗಳು ಯಾವುವು ; (ಅವುಗಳ ವಿವರ ನೀಡುವುದು)

(ಆ) ಈ ಯೋಜನೆಯಡಿ ಹೈದ್ರಾಬಾದ್ ಕರ್ನಾಟಕ ಜಿಲ್ಲೆಗಳಲ್ಲಿ ಕೈಗೊಂಡ ಕಾಮಗಾರಿಗಳಾವುವು ; ನಿಗಧಿಪಡಿಸಿದ ಅನುದಾನದ ಪೈಕಿ ಖರ್ಚಾದ ಮೊತ್ತವೆಷ್ಟು ;

(ಇ) ಈ ಯೋಜನೆ ವ್ಯಾಪ್ತಿಯ ಪ್ರತಿಯೊಂದು ಜಿಲ್ಲೆಗಳಲ್ಲಿ ಕೈಗೊಳ್ಳಲಾದ ಕಾಮಗಾರಿಗಳಾವುವು ? (ತಾಲ್ಲೂಕುವಾರು ವರ್ಷಾವಾರು, ಫಲಾನುಭವಿವಾರು, ವ್ಯಕ್ತಿ/ಸಂಸ್ಥೆಗಳ ಸಮಗ್ರ ವಿವರ ನೀಡುವುದು)

## ಬೆಂಗಳೂರು ನಗರ ಜಿಲ್ಲೆಯ ಶ್ರೀ ಧರ್ಮರಾಯ ಸ್ವಾಮಿ ದೇವಾಲಯದ ಆಸ್ತಿಗಳ ಬಗ್ಗೆ

**ಶ್ರೀ ಪಿ.ಆರ್. ರಮೇಶ್ (ನಾಮನಿರ್ದೇಶನ ಹೊಂದಿದವರು):–**

೫೭ (೪೫) ಮಾನ್ಯ ಜವಳಿ ಹಾಗೂ ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ನಗರ ಜಿಲ್ಲೆಯಲ್ಲಿ ಮುಜರಾಯಿ ಇಲಾಖೆಯ ಅಡಿಯಲ್ಲಿ ಬರುವ ಶ್ರೀ ಧರ್ಮರಾಯ ಸ್ವಾಮಿ ದೇವಸ್ಥಾನದ ಒಟ್ಟು ಸ್ವತ್ತುಗಳು ಎಷ್ಟು ; (ಸಂಪೂರ್ಣ ವಿವರಗಳನ್ನು ನೀಡುವುದು)

(ಆ) ಈ ದೇವಸ್ಥಾನಕ್ಕೆ ಸೇರಿರುವ ಸ್ವತ್ತುಗಳಲ್ಲಿ ಯಾವುದಾದರೂ ಈ ಹಿಂದೆ ಭೂಸ್ವಾಧೀನವಾಗಿದೆಯೇ ; ಆಗಿದ್ದಲ್ಲಿ ಇದಕ್ಕೆ ಸರ್ಕಾರ/ ಸ್ವಾಧೀನ ಪಡಿಸಿಕೊಂಡಿರುವ ಇಲಾಖೆಯಿಂದ ನೀಡಿರುವ ಪರಿಹಾರ ಎಷ್ಟು ; (ಸಂಪೂರ್ಣ ವಿವರ ನೀಡುವುದು)

(ಇ) ಈ ದೇವಸ್ಥಾನಕ್ಕೆ ಸೇರಿದ ಸ್ವತ್ತುಗಳು ಎಲ್ಲಾ ನ್ಯಾಯಾಲಯಗಳಲ್ಲಿ ಅಥವಾ ಇತರೆ ಪ್ರಾಧಿಕಾರಗಳ ಮುಂದೆ ಚಾಲ್ತಿಯಲ್ಲಿರುವ ಹಾಗೂ ಇತ್ಯರ್ಥಗೊಂಡಿರುವ ಪ್ರಕರಣಗಳ ಮಾಹಿತಿ ನೀಡುವುದು ; ಸರ್ಕಾರ ಆಡಳಿತಾತ್ಮಕವಾಗಿ ದೇವಸ್ಥಾನದ ಎಲ್ಲಾ ಸ್ವತ್ತುಗಳ ಮೇಲೆ ಕೈಗೊಂಡ ಕ್ರಮಗಳೇನು ? (ಸಂಪೂರ್ಣ ವಿವರ ನೀಡುವುದು)

## ಅರ್ಚಕರ ನೇಮಕಾತಿ ಬಗ್ಗೆ

**ಶ್ರೀ ಪಿ.ಆರ್. ರಮೇಶ್ (ನಾಮನಿರ್ದೇಶನ ಹೊಂದಿದವರು):–**

೫೭ (೪೪) ಮಾನ್ಯ ಜವಳಿ ಹಾಗೂ ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ನಗರ ಜಿಲ್ಲೆ ಮುಜರಾಯಿ ಇಲಾಖೆ ಅಡಿಯಲ್ಲಿ ಬರುವ ಅಲಸೂರು ಪೇಟೆಯಲ್ಲಿರುವ ಶ್ರೀ ಧರ್ಮರಾಯ ಸ್ವಾಮಿ ದೇವಸ್ಥಾನದಲ್ಲಿ ೨೦೧೭ರ ಕರಗ ಶಕ್ತ್ಯೋತ್ಸವ ನಡೆಸಲು ಸರ್ಕಾರ ಆದೇಶ ದಿನಾಂಕ: ೨೫-೦೩-೨೦೧೭ರಲ್ಲಿ ಎಷ್ಟು ಅರ್ಚಕರನ್ನು ನೇಮಿಸಲಾಗಿದೆ ; ನೇಮಿಸಿದ್ದಲ್ಲಿ, ೨೦೧೭ರ ಕರಗ ಶಕ್ತ್ಯೋತ್ಸವ ನಡೆಸಲು ಯಾವ ಅರ್ಚಕರಿಗೆ ಸರ್ಕಾರ ಆದೇಶಿಸಿರುತ್ತಾರೆ ; (ಸಂಪೂರ್ಣ ವಿವರಗಳನ್ನು ದಾಖಲಾತಿಯೊಂದಿಗೆ ನೀಡುವುದು)

(ಆ) ಸರದಿ ಅರ್ಚಕರಾಗಿ ಸರ್ಕಾರ ಆದೇಶ ದಿನಾಂಕ: ೨೫-೦೩-೨೦೧೭ರಲ್ಲಿ ಎರಡನೇ ಅರ್ಚಕರಾಗಿ ನೇಮಕಾತಿಯಾಗಿರುವ ಹೆಸರನ್ನು ನೀಡುವುದು ;

(ಇ) ಸರದಿ ಅರ್ಚಕರ ನೇಮಕಾತಿಗೆ ಸರ್ಕಾರ ಪ್ರಾರಂಭದಲ್ಲಿಯೇ ಅಧಿಸೂಚನೆ ಹೊರಡಿಸಲಾಗಿದೆಯೇ ; ಹೊರಡಿಸಿದ್ದಲ್ಲಿ ಅಧಿಸೂಚನೆಯ ಪ್ರತಿಯನ್ನು ನೀಡುವುದು ;

(ಈ) ಅರ್ಚಕರ ಅಧಿಸೂಚನೆಯ ನೇಮಕಾತಿ ಪ್ರಕಾರ ಎಷ್ಟು ಅರ್ಜಿದಾರರು ಅರ್ಜಿ ಸಲ್ಲಿಸಿರುತ್ತಾರೆ ; ಈ ಪ್ರಕಾರ ಆಯ್ಕೆಯಾದ ಅಭ್ಯರ್ಥಿಗಳ ಪಟ್ಟಿ ನೀಡುವುದು ; (ಸಂಪೂರ್ಣವಾದ ಮಾಹಿತಿಯನ್ನು ದಾಖಲೆಗಳೊಂದಿಗೆ ನೀಡುವುದು)

(ಉ) ಸದರಿ ದೇವಸ್ಥಾನದ ಅರ್ಚಕರ ಆಯ್ಕೆ ಪ್ರಕರಣದಲ್ಲಿ ನ್ಯಾಯಾಲಯದಲ್ಲಿ ಕೇಸು ದಾಖಲಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಪ್ರಕರಣಗಳ ಮಾಹಿತಿ ಹಾಗೂ ನ್ಯಾಯಾಲಯ ನೀಡಿರುವ ಆದೇಶದ ವಿವರಗಳನ್ನು ಒದಗಿಸುವುದು ?

## ರೇಷ್ಮೆ ಇಲಾಖೆ ಸಿಬ್ಬಂದಿ ಕುರಿತು

**ಶ್ರೀ ರಮೇಶ್‌ಬಾಬು (ಶಿಕ್ಷಕರ ಕ್ಷೇತ್ರ) :–**

೫೮ (೬೮) ಮಾನ್ಯ ಪಶು ಸಂಗೋಪನೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯ ಸರ್ಕಾರದ ರೇಷ್ಮೆ ಇಲಾಖೆಗೆ ಮಂಜೂರಾಗಿರುವ ಒಟ್ಟು ಸಿಬ್ಬಂದಿಗಳ ಸಂಖ್ಯೆ ಎಷ್ಟು ; ಪ್ರಸ್ತುತ ಕೆಲಸ ಮಾಡುತ್ತಿರುವ ಸಿಬ್ಬಂದಿಗಳೆಷ್ಟು ಮತ್ತು ಖಾಲಿಯಿರುವ ಹುದ್ದೆಗಳೆಷ್ಟು ; ಪ್ರಸ್ತುತ ರೇಷ್ಮೆ ಇಲಾಖೆಗೆ ಅವಶ್ಯಕತೆ ಇರುವ ಸಿಬ್ಬಂದಿಗಳ ಸಂಖ್ಯೆ ಎಷ್ಟು ;

(ಆ) ರೇಷ್ಮೆ ಇಲಾಖೆಯ ಸಿಬ್ಬಂದಿಯನ್ನು ಬೇರೆ ಇಲಾಖೆಯೊಂದಿಗೆ ವಿಲೀನಗೊಳಿಸುವ ಉದ್ದೇಶ ಸರ್ಕಾರಕ್ಕೆ ಇದೆಯೇ ; ಪ್ರತಿ ವರ್ಷ ರೇಷ್ಮೆ ಇಲಾಖೆಯ ಸಿಬ್ಬಂದಿಗೆ ರಾಜ್ಯ ಸರ್ಕಾರ ವೇತನ ಹಾಗೂ ಇತರೆ ಆರ್ಥಿಕ ಸೌಲಭ್ಯಗಳ ಮೂಲಕ ಪಾವತಿ ಮಾಡುತ್ತಿರುವ ಹಣವೆಷ್ಟು ;

(ಇ) ರಾಜ್ಯ ಸರ್ಕಾರದ ರೇಷ್ಮೆ ಇಲಾಖೆಯ ಹೆಸರಿನಲ್ಲಿರುವ ಭೂಮಿಯ ವಿಸ್ತೀರ್ಣವೆಷ್ಟು ; ಇದರಲ್ಲಿ ಎಷ್ಟು ಭೂಮಿಯನ್ನು ಇಲಾಖೆಯ ಕಾರ್ಯಚಟುವಟಿಕೆಗಳಿಗೆ ಬಳಸಿಕೊಳ್ಳಲಾಗುತ್ತಿದೆ ; ಅನುಪಯುಕ್ತವಾದ ಅಥವಾ ರೇಷ್ಮೆ ಕೃಷಿ ನಡೆಸದ ಎಷ್ಟು ಭೂಮಿ ರೇಷ್ಮೆ ಇಲಾಖೆಯಲ್ಲಿ ಇರುತ್ತದೆ ;

(ಈ) ರೇಷ್ಮೆ ಇಲಾಖೆಯ ಅನುಪಯುಕ್ತ ಭೂಮಿಯನ್ನು ಶೈಕ್ಷಣಿಕ ಉದ್ದೇಶಕ್ಕಾಗಿ ಶಿಕ್ಷಣ ಇಲಾಖೆಗೆ ನೀಡಲು ಅವಕಾಶವಿದೆಯೇ ; ಇದ್ದಲ್ಲಿ ಯಾವ ಸರ್ಕಾರಿ ಆದೇಶದ ಮೂಲಕ ನೀಡಲಾಗುತ್ತಿದೆ ; ಇಲ್ಲಿಯವರೆಗೆ ರಾಜ್ಯದಲ್ಲಿ ರೇಷ್ಮೆ ಇಲಾಖೆಯ ಎಷ್ಟು ಭೂಮಿಯನ್ನು ಶಿಕ್ಷಣ ಇಲಾಖೆಗೆ ಯಾವ ಯಾವ ದಿನಾಂಕದಲ್ಲಿ ನೀಡಲಾಗಿರುತ್ತದೆ ? (ವಿವರವಾದ ಮಾಹಿತಿಯನ್ನು ನೀಡುವುದು)

## ಸಿರಿಧಾನ್ಯಗಳ ಕುರಿತು

**ಶ್ರೀ ರಮೇಶ್‌ಬಾಬು (ಶಿಕ್ಷಕರ ಕ್ಷೇತ್ರ) :–**

೫೯ (೬೯) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯ ಸರ್ಕಾರದ ಕೃಷಿ ಇಲಾಖೆಯು ಸಿರಿಧಾನ್ಯಗಳ ಬೆಳೆಗೆ ಪ್ರೋತ್ಸಾಹ ನೀಡಲು ಪ್ರತಿ ಹೆಕ್ಟೇರ್‌ಗೆ ನೀಡುತ್ತಿರುವ ಸಹಾಯ ಧನ ಎಷ್ಟು ; ಇದನ್ನು ಹೆಚ್ಚು ಮಾಡಲು ಸರ್ಕಾರ ಉದ್ದೇಶಿಸಿದೆಯೇ ;

(ಆ) ರಾಜ್ಯದಲ್ಲಿ ವಿವಿಧ ಹಂಗಾಮುಗಳಲ್ಲಿ ಪ್ರತಿ ವರ್ಷ ಎಷ್ಟು ವಿಧದ ಸಿರಿಧಾನ್ಯಗಳನ್ನು ಬೆಳೆಯಲಾಗುತ್ತಿದೆ ; ಕಳೆದ ಮೂರು ವರ್ಷಗಳಲ್ಲಿ

ಎಷ್ಟು ಸಿರಿಧಾನ್ಯಗಳನ್ನು ಬೆಳೆಯಲಾಗಿದೆ ಮತ್ತು ಎಷ್ಟು ಪ್ರೋತ್ಸಾಹ ಧನವನ್ನು ನೀಡಲಾಗಿದೆ ; (ತಾಲ್ಲೂಕುವಾರು ವಿವರಗಳನ್ನು ನೀಡುವುದು)

(ಇ) ರಾಜ್ಯ ಸರ್ಕಾರವು ಸಿರಿಧಾನ್ಯಗಳ ಸಂಗ್ರಹಣೆಗೆ ನಿರ್ಮಿಸಿರುವ ಗೋದಾಮುಗಳ ಸಂಖ್ಯೆ ಎಷ್ಟು ; ಸಿರಿಧಾನ್ಯ ಸಂಗ್ರಹಣೆಯ ಗೋದಾಮುಗಳ ನಿರ್ಮಾಣಕ್ಕೆ ಪ್ರೋತ್ಸಾಹ ಧನ ಅಥವಾ ಅನುದಾನ ನೀಡುವ ಯೋಜನೆ ಸರ್ಕಾರದ ಮುಂದೆ ಇದೆಯೇ ;

(ಈ) ಸಿರಿಧಾನ್ಯಗಳ ಮಾರುಕಟ್ಟೆಗೆ ರಾಜ್ಯದಲ್ಲಿ ಸರ್ಕಾರ ಯಾವ ಯೋಜನೆಯನ್ನು ರೂಪಿಸಿರುತ್ತದೆ ; ರೂಪಿಸದೇ ಇದ್ದಲ್ಲಿ ಯಾವಾಗ ಯೋಜನೆಯನ್ನು ರೂಪಿಸಲಾಗುವುದು ; ಸಿರಿಧಾನ್ಯ ಬೆಳೆಯ ರೈತರಿಗೆ ಮಾಹಿತಿ ಹಾಗೂ ಯೋಜನೆಗಳನ್ನು ರೂಪಿಸಲು ರಾಜ್ಯ ಸರ್ಕಾರ ಹಮ್ಮಿಕೊಂಡಿರುವ ಕಾರ್ಯಕ್ರಮಗಳಾವುವು ;

(ಉ) ರಾಜ್ಯದಲ್ಲಿರುವ ಸಾವಯವ ಕೃಷಿಕರ ಸಹಕಾರ ಸಂಘಗಳ ಮತ್ತು ಸಿರಿಧಾನ್ಯ ಬೆಳೆಗಾರರ ಸಹಕಾರ ಸಂಘಗಳ ಸಂಖ್ಯೆ ಎಷ್ಟು ; ಇಂತಹ ಸಹಕಾರ ಸಂಘಗಳಿಗೆ ರಾಜ್ಯ ಸರ್ಕಾರ ಯಾವ ರೀತಿಯ ಆರ್ಥಿಕ ಸಹಾಯ ಮತ್ತು ಅನುದಾನಗಳನ್ನು ನೀಡುತ್ತಿದೆ ?

## ತೆಂಗು ಬೆಳೆ ಪರಿಹಾರ ಕುರಿತು

**ಶ್ರೀ ರಮೇಶ್‌ಬಾಬು (ಶಿಕ್ಷಕರ ಕ್ಷೇತ್ರ):–**

೬೦ (೬೭) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ಮೂರು ವರ್ಷಗಳಲ್ಲಿ ಕರ್ನಾಟಕ ರಾಜ್ಯದಲ್ಲಿ ನಾಶವಾಗಿರುವ ತೆಂಗಿನ ಮರ ಹಾಗೂ ಅಡಿಕೆ ಮರಗಳ ಸಂಖ್ಯೆ ಎಷ್ಟು ; ರಾಜ್ಯ

ಸರ್ಕಾರ ನಾಶವಾಗಿರುವ ಮರಗಳಿಗೆ ನೀಡುತ್ತಿರುವ ಪರಿಹಾರದ ಮೊತ್ತವೆಷ್ಟು ; ಮತ್ತು ರೈತರಿಗೆ ಇಲ್ಲಿಯವರೆಗೆ ನೀಡಲಾಗಿರುವ ಮೊತ್ತವೆಷ್ಟು ; ಬಾಕಿಯಿರುವ ಪರಿಹಾರದ ಮೊತ್ತ ಎಷ್ಟು ;

(ಆ) ತುಮಕೂರು ಜಿಲ್ಲೆಯಲ್ಲಿ ಕಳೆದ ಮೂರು ವರ್ಷಗಳಲ್ಲಿ ನಾಶವಾಗಿರುವ ತೆಂಗಿನಮರ ಮತ್ತು ಅಡಿಕೆ ಮರಗಳ ಸಂಖ್ಯೆ ಎಷ್ಟು ; ಮರಗಳನ್ನು ಕಳೆದುಕೊಂಡು ಸಂಕಷ್ಟಕ್ಕೆ ಒಳಗಾಗಿರುವ ರೈತರ ಕುಟುಂಬಗಳೆಷ್ಟು ; ಪ್ರತಿ ಮರದಂತೆ ಇಲ್ಲಿಯವರೆಗೆ ಪರಿಹಾರ ನೀಡಲಾಗಿರುವ ರೈತರ ಸಂಖ್ಯೆ ಎಷ್ಟು ; ಬಾಕಿಯಿರುವ ಪರಿಹಾರದ ಹಣ ಎಷ್ಟು ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಇ) ತುಮಕೂರು ಜಿಲ್ಲೆಯ ಚಿಕ್ಕನಾಯಕನಹಳ್ಳಿ ತಾಲ್ಲೂಕಿನ ತೋಟಗಾರಿಕಾ ಸಹ ನಿರ್ದೇಶಕರು ಜನಪ್ರತಿನಿಧಿಗಳನ್ನು ಆಹ್ವಾನಿಸದೇ ಫಲಾನುಭವಿಗಳನ್ನು ಆಯ್ಕೆ ಮಾಡಿರುವ ಕುರಿತು ದೂರು ಬಂದಿರುತ್ತದೆಯೇ ; ಬಂದಿದ್ದಲ್ಲಿ ಅವರ ಮೇಲೆ ಸರ್ಕಾರ ಕೈಗೊಂಡಿರುವ ಕ್ರಮವೇನು ;

(ಈ) ತುಮಕೂರು ಜಿಲ್ಲೆಯಲ್ಲಿ ತೋಟಗಾರಿಕೆ ಇಲಾಖೆಗೆ ಕಳೆದ ಮೂರು ವರ್ಷಗಳಿಂದ ಇಲ್ಲಿಯುವರೆಗೆ ಅನುದಾನ ಬಿಡುಗಡೆ ಮಾಡಲಾಗಿರುವ, ಯೋಜನೆಗಳಾವುವು ; ಬಳಕೆಯಾಗಿರುವ ಹಣ ಎಷ್ಟು ; ಬಾಕಿ ಇರುವ ಹಣ ಎಷ್ಟು ?

## ಮಲ್ಲೇಶ್ವರಂ ಸಹಕಾರ ಸಂಘ ಕುರಿತು

**ಶ್ರೀ ರಮೇಶ್‌ಬಾಬು (ಶಿಕ್ಷಕರ ಕ್ಷೇತ್ರ):–**

೬೧ (೬೬) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರಿನ ಮಲ್ಲೇಶ್ವರಂನಲ್ಲಿರುವ ಮಲ್ಲೇಶ್ವರಂ ಸಹಕಾರ ಸಂಘದಲ್ಲಿರುವ ಒಟ್ಟು ಸದಸ್ಯರ ಸಂಖ್ಯೆ ಎಷ್ಟು ; ಮಲ್ಲೇಶ್ವರಂ ಸಹಕಾರ ಸಂಘಕ್ಕೆ ಸರ್ಕಾರದಿಂದ ಆಡಳಿತಾಧಿಕಾರಿಯನ್ನು ನೇಮಿಸಲಾಗಿರುವುದು ಯಾವಾಗ ; ಸದರಿ ಸಂಘವನ್ನು ಲಿಕ್ವಿಡೇಟ್ ಮಾಡಲಾಗಿದ್ದು ಯಾವಾಗ ;

(ಆ) ಮಲ್ಲೇಶ್ವರಂ ಸಹಕಾರ ಸಂಘಕ್ಕೆ ಆಡಳಿತಾಧಿಕಾರಿಯನ್ನು ನೇಮಕ ಮಾಡಿದ ನಂತರ ನಡೆಸಲಾಗಿರುವ ಸರ್ವ ಸದಸ್ಯರ ಸಭೆಗಳೆಷ್ಟು ; ಯಾವ ಸರ್ವ ಸದಸ್ಯರ ಸಭೆಯಲ್ಲಿ ಸಹಕಾರ ಸಂಘದ ಆಸ್ತಿಯನ್ನು ಮಾರಾಟ ಮಾಡಲು ತೀರ್ಮಾನ ತೆಗೆದುಕೊಳ್ಳಲಾಯಿತು ; ಮಲ್ಲೇಶ್ವರಂ ಸಹಕಾರ ಸಂಘದ ಒಟ್ಟು ಆಸ್ತಿಯ ಇಂದಿನ ಮಾರುಕಟ್ಟೆ ಬೆಲೆ ಎಷ್ಟು ; ಮಲ್ಲೇಶ್ವರಂ ಸಹಕಾರ ಸಂಘದ ಎಷ್ಟು ಆಸ್ತಿಯನ್ನು ಸಹಕಾರಿ ಇಲಾಖೆಯು ಆಡಳಿತಾಧಿಕಾರಿಗಳು ಮತ್ತು ಲಿಕ್ವಿಡೇಟರ್‌ಗಳು ಇಲ್ಲಿಯವರೆಗೆ ಮಾರಾಟ ಮಾಡಿರುತ್ತಾರೆ ;

(ಇ) ಸಹಕಾರ ಸಂಘದ ಕಾಯ್ದೆ ಪ್ರಕಾರ ಲಿಕ್ವಿಡೇಟ್ ಆದ ನಂತರ ಸಂಘದ ಆಸ್ತಿಯನ್ನು ಸಂಘದ ಸದಸ್ಯರಿಗೆ ಹಂಚಲು ಕಾನೂನಿನಲ್ಲಿ ಅವಕಾಶವಿದೆಯೇ, ಒಂದು ಸಹಕಾರ ಸಂಘದ ಆಸ್ತಿಯನ್ನು ಸದಸ್ಯರಿಗೆ ನೀಡದೇ ಸರ್ಕಾರ ಸ್ವಾಧೀನಪಡಿಸಿಕೊಳ್ಳಲು ಸರ್ಕಾರಿ ಕಾಯ್ದೆಯಲ್ಲಿ ಅವಕಾಶವಿದೆಯೇ ;

(ಈ) ಮಲ್ಲೇಶ್ವರಂ ಸಹಕಾರ ಸಂಘದ ಆಸ್ತಿಯನ್ನು ರಾಜ್ಯ ಸರ್ಕಾರ ಪಡೆದುಕೊಂಡಿದೆಯೇ ; ಪಡೆದುಕೊಂಡಿದ್ದಲ್ಲಿ, ಒಂದು ಸಹಕಾರ ಸಂಘದ ಆಸ್ತಿಯನ್ನು ಸರ್ಕಾರ ಪಡೆಯಲು ಕಾನೂನಿನಲ್ಲಿ ಅವಕಾಶವಿದೆಯೇ ?

## ಕೃಷಿ ಇಲಾಖೆಯ ವಿವಿಧ ಯೋಜನೆಗಳಿಗೆ ಅನುದಾನ ಒದಗಿಸುವ ಬಗ್ಗೆ

**ಶ್ರೀ ಸೋಮಣ್ಣ ಮ. ಬೇವಿನಮರದ(ವಿಧಾನಸಭೆಯಿಂದ ಚುನಾಯಿತರಾದವರು):–**

೬೨ (೬೦) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೩–೧೪ ರಿಂದ ೨೦೧೭–೧೮ರವರೆಗೆ ಹಾವೇರಿ ಜಿಲ್ಲೆಗೆ ಕೃಷಿ ಇಲಾಖೆಯಿಂದ ಯಾವ ಯಾವ ಯೋಜನೆಯಡಿಯಲ್ಲಿ ಬಿಡುಗಡೆಯಾದ ಅನುದಾನವೆಷ್ಟು ; ಇದರಲ್ಲಿ ಖರ್ಚಾದ ಅನುದಾನವೆಷ್ಟು ; (ವರ್ಷಾವಾರು, ಯೋಜನಾವಾರು ಮತ್ತು ತಾಲ್ಲೂಕುವಾರು ಸಂಪೂರ್ಣ ಮಾಹಿತಿ ನೀಡುವುದು)

(ಆ) ಶಿಗ್ಗಾಂವ–ಸವಣೂರು ಮತ ಕ್ಷೇತ್ರದಲ್ಲಿ ಕೃಷಿ ಇಲಾಖೆಯ ವಿವಿಧ ಯೋಜನೆಯಡಿಯಲ್ಲಿ ವಿವಿಧ ಸೌಲಭ್ಯ ಪಡೆದ ಫಲಾನುಭವಿಗಳ ಸಂಖ್ಯೆ ಹಾಗೂ ಸೌಲಭ್ಯದ ಮೊತ್ತವೆಷ್ಟು ? (ಯೋಜನಾವಾರು, ವರ್ಷಾವಾರು, ಫಲಾನುಭವಿಗಳ ಹೆಸರುಗಳೊಂದಿಗೆ ವಿವರ ನೀಡುವುದು)

## ಮುಜರಾಯಿ ಇಲಾಖೆಯಿಂದ ಬಂದ ಅನುದಾನದ ಬಗ್ಗೆ

**ಶ್ರೀ ಸೋಮಣ್ಣ ಮ. ಬೇವಿನಮರದ(ವಿಧಾನಸಭೆಯಿಂದ ಚುನಾಯಿತರಾದವರು):–**

೬೩ (೨೧) ಮಾನ್ಯ ಜವಳಿ ಹಾಗೂ ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೩–೧೪ ರಿಂದ ೨೦೧೭–೧೮ರವರೆಗೆ ಹಾವೇರಿ ಜಿಲ್ಲೆಗೆ ಮುಜರಾಯಿ ಇಲಾಖೆಗೆ ಸರ್ಕಾರದಿಂದ ಬಂದ ಅನುದಾನ ಎಷ್ಟು ; (ತಾಲ್ಲೂಕುವಾರು ವರ್ಷಾವಾರು ವಿವರ ನೀಡುವುದು ಖರ್ಚಾದ ಅನುದಾನ ವಿವರ ನೀಡುವುದು)

(ಆ) ಹಾವೇರಿ ಜಿಲ್ಲೆಯಲ್ಲಿ ಮುಜರಾಯಿ ಇಲಾಖೆಗೆ ಸೇರಿದ ದೇವಸ್ಥಾನ ಮತ್ತು ಮಂದಿರಗಳು ಎಷ್ಟು ; ಇವುಗಳಿಂದ ಬರುವ ಆದಾಯವೆಷ್ಟು ; ಇವುಗಳ ಆದಾಯ ಸರ್ಕಾರ ಯಾವುದಕ್ಕೆ ಉಪಯೋಗಿಸುತ್ತಿದೆ ? (ತಾಲ್ಲೂಕುವಾರು ದೇವಸ್ಥಾನಗಳ ಆದಾಯವಾರು ವಿವರ ನೀಡುವುದು)

## ವಿವಿಧ ಯೋಜನೆಗಳಿಗೆ ಅನುದಾನ ಬಿಡುಗಡೆ ಬಗ್ಗೆ

**ಶ್ರೀ ಸೋಮಣ್ಣ ಮ. ಬೇವಿನಮರದ(ವಿಧಾನಸಭೆಯಿಂದ ಚುನಾಯಿತರಾದವರು):–**

೬೪ (೩೦) ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೩–೧೪ ರಿಂದ ೨೦೧೭–೧೮ರವರೆಗೆ ಹಾವೇರಿ ಜಿಲ್ಲೆಯ ಪಶುಸಂಗೋಪನೆ ಇಲಾಖೆಗೆ ಯಾವ ಯಾವ ಯೋಜನೆಯಡಿಯಲ್ಲಿ ಎಷ್ಟೆಷ್ಟು ಅನುದಾನವನ್ನು ಒದಗಿಸಲಾಗಿದೆ ; ಅದರಲ್ಲಿ ಖರ್ಚಾದ ಅನುದಾನ ಎಷ್ಟು ; (ವರ್ಷಾವಾರು ಯೋಜನೆವಾರು ತಾಲ್ಲೂಕುವಾರು ಸಂಪೂರ್ಣ ಮಾಹಿತಿ ಒದಗಿಸುವುದು)

(ಆ) ಹಾವೇರಿ ಜಿಲ್ಲೆಯ ಶಿಗ್ಗಾಂವ–ಸವಣೂರು ಮತ ಕ್ಷೇತ್ರದಲ್ಲಿ ಇಲಾಖೆಯ ವಿವಿಧ ಯೋಜನೆಗಳಡಿಯಲ್ಲಿ ಎಷ್ಟು ಫಲಾನುಭವಿಗಳು ಯಾವ ಯಾವ ಸೌಲಭ್ಯ ಪಡೆದಿದ್ದಾರೆ ? (ವರ್ಷಾವಾರು ಯೋಜನಾವಾರು ಸೌಲಭ್ಯವಾರು ಸೌಲಭ್ಯ ಅನುದಾನವಾರು ವಿವರ ನೀಡುವುದು)

## ಗುತ್ತಿಗೆ ಕಾರ್ಮಿಕರ ಪರಿಹಾರದ ಬಗ್ಗೆ

**ಶ್ರೀ ಮಾನೆ ಶ್ರೀನಿವಾಸ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೫ (೮೨) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ವಿದ್ಯುತ್ ಸರಬರಾಜು ಕಂಪನಿಗಳಲ್ಲಿ ಗುತ್ತಿಗೆ ಆಧಾರದಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಕಾರ್ಮಿಕರ ಸಂಖ್ಯೆ ಎಷ್ಟು ;

(ಆ) ಕಳೆದ ೪ ವರ್ಷಗಳಲ್ಲಿ ಗುತ್ತಿಗೆ ಆಧಾರದಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಕಾರ್ಮಿಕರು ವಿದ್ಯುತ್ ಅವಘಡದಲ್ಲಿ ಮೃತರಾದವರ ಸಂಖ್ಯೆ ಎಷ್ಟು ;

(ಇ) ವಿದ್ಯುತ್ ಅವಘಡದಲ್ಲಿ ಮೃತರಾದರೆ ಅವರಿಗೆ ನೀಡುವ ಪರಿಹಾರ ಎಷ್ಟು ;

(ಈ) ಇಲಾಖೆಯ ಖಾಯಂ ನೌಕರರು, ಅವಘಡದಲ್ಲಿ ಮೃತರಾದರೆ ಅವರ ಕುಟುಂಬಕ್ಕೆ ಇಲಾಖೆಯಿಂದ ಪೂರ್ಣ ಪರಿಹಾರ ಸಿಗುತ್ತದೆ ಆದರೆ, ಗುತ್ತಿಗೆ ನೌಕರರು ವಿದ್ಯುತ್ ಅವಘಡದಲ್ಲಿ ಮೃತರಾದರೆ ಕೇವಲ ಭವಿಷ್ಯ ನಿಧಿ ನೀಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮವೇನು ?

## ರಾಜ್ಯದಲ್ಲಿರುವ ಮುಜರಾಯಿ ಮತ್ತು ಸರ್ಕಾರೇತರ ದೇವಾಲಯಗಳ ಬಗ್ಗೆ

**ಶ್ರೀ ಎಂ.ಪಿ. ಸುನೀಲ್ ಸುಬ್ರಮಣಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೬ (೦೧) ಮಾನ್ಯ ಜವಳಿ ಹಾಗೂ ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿರುವ ಮುಜರಾಯಿ ಹಾಗೂ ಸರ್ಕಾರೇತರ ದೇವಾಲಯಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ಹೆಸರುಗಳೊಂದಿಗೆ ಮಾಹಿತಿ ನೀಡುವುದು)

(ಆ) ರಾಜ್ಯದಲ್ಲಿರುವ ಸರ್ಕಾರಿ ಹಾಗೂ ಸರ್ಕಾರೇತರ ದೇವಾಲಯಗಳ ಅಧೀನದಲ್ಲಿರುವ ಜಾಗಗಳು ದೇವಾಲಯ ಸಮಿತಿಯ ಹೆಸರಿಗೆ ನೋಂದಾವಣಿ ಆಗಿದೆಯೇ ; ಹಾಗಿದ್ದಲ್ಲಿ, ನೋಂದಾವಣಿಯಾಗಿರುವ ಮತ್ತು ಬಾಕಿ ಇರುವ ಪ್ರಕರಣಗಳೆಷ್ಟು ;

(ಇ) ಮುಜರಾಯಿ ಹಾಗೂ ಸರ್ಕಾರೇತರ ದೇವಾಲಯಗಳಲ್ಲಿನ ಜಾಗಗಳು ದೇವಾಲಯ ಸಮಿತಿಯ ಹೆಸರಿಗೆ ನೋಂದಾವಣಿ ಮಾಡಲು ಇಲಾಖಾ ಅಧಿಕಾರಿಗಳಿಗೆ ಯಾವ ರೀತಿಯ ನಿರ್ದೇಶನ ನೀಡಲಾಗಿದೆ ; ಮಾಹಿತಿ ನೀಡುವುದು ;

(ಈ) ಸರ್ಕಾರಿ ಹಾಗೂ ಸರ್ಕಾರೇತರ ದೇವಾಲಯಗಳಲ್ಲಿನ ಜಾಗಗಳನ್ನು ದೇವಾಲಯದ ಹೆಸರಿಗೆ ಮಂಜೂರು ಮಾಡುವಲ್ಲಿ ಇತ್ಯರ್ಥಪಡಿಸಲಾಗದ ಪ್ರಕರಣಗಳು ಯಾವುದಾದರೂ ಇದೆಯೇ ; ಇದ್ದಲ್ಲಿ ಮಾಹಿತಿ ನೀಡುವುದು ?

## ಲೋಕೋಪಯೋಗಿ ವ್ಯಾಪ್ತಿಯ ರಸ್ತೆಗಳ ದುರಸ್ಥಿ ಬಗ್ಗೆ

**ಶ್ರೀ ಎಂ.ಪಿ. ಸುನೀಲ್ ಸುಬ್ರಮಣಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೭ (೦೨) ಮಾನ್ಯ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೭–೧೮ನೇ ಸಾಲಿನಲ್ಲಿ ರಾಜ್ಯದಲ್ಲಿನ ಲೋಕೋಪಯೋಗಿ ರಸ್ತೆಗಳ ನಿರ್ವಹಣೆ/ದುರಸ್ಥಿಗೆ ಬಿಡುಗಡೆಯಾದ ಅನುದಾನವೆಷ್ಟು ; ತಾಲ್ಲೂಕುವಾರು ಮಾಹಿತಿ ನೀಡುವುದು ;

(ಆ) ಪ್ರಸ್ತುತ ಸಾಲಿನಲ್ಲಿ ಕೊಡಗು ಜಿಲ್ಲೆಯ ಲೋಕೋಪಯೋಗಿ ಇಲಾಖಾ ರಸ್ತೆಗಳಿಗೆ ಬಿಡುಗಡೆ ಮಾಡಲಾದ ಅನುದಾನವೆಷ್ಟು ;

(ಇ) ಸದರಿ ಬಿಡುಗಡೆಯಾದ ಅನುದಾನದಲ್ಲಿ ಕಾಮಗಾರಿ ಪೂರ್ಣಗೊಂಡಿದೆಯೇ ; ಇಲ್ಲವಾದಲ್ಲಿ ಪೂರ್ಣಗೊಳಿಸಲು ತೆಗೆದುಕೊಂಡ ಕ್ರಮಗಳೇನು ;

(ಈ) ಕೊಡಗು ಜಿಲ್ಲೆಗೆ ಹೆಚ್ಚುವರಿಯಾಗಿ ರಸ್ತೆಗಳ ನಿರ್ವಹಣೆಗೆ ಅನುದಾನ ಮೀಸಲಿಡಲಾಗಿದೆಯೇ ; ಮೀಸಲಿಟ್ಟಿದ್ದಲ್ಲಿ ಹೆಚ್ಚುವರಿ ಅನುದಾನ ಯಾವ ನಿಗಧಿತ ಸಮಯದಲ್ಲಿ ಬಿಡುಗಡೆ ಮಾಡಲಾಗುವುದು ?

## ಪಶು ಆಸ್ಪತ್ರೆಗಳ ಬಗ್ಗೆ

**ಶ್ರೀ ಕೆ.ಟಿ. ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ) :–**

೬೮ (೧೫) ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿರುವ ಪಶು ವೈದ್ಯಕೀಯ ಆಸ್ಪತ್ರೆಗಳ ಸಂಖ್ಯೆ ಎಷ್ಟು ;

(ಆ) ಇದರಲ್ಲಿ ಸ್ವಂತ ಕಟ್ಟಡ ಇರುವ ಆಸ್ಪತ್ರೆಗಳ ಸಂಖ್ಯೆ ಎಷ್ಟು ; ಸ್ವಂತ ಕಟ್ಟಡ ಇಲ್ಲದೆ ಇರುವ ಆಸ್ಪತ್ರೆಗಳೆಷ್ಟು ;

(ಇ) ಸ್ವಂತ ಕಟ್ಟಡ ಇಲ್ಲದ ಆಸ್ಪತ್ರೆಗಳಿಗೆ ಸ್ವಂತ ಕಟ್ಟಡವನ್ನು ನಿರ್ಮಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ;

(ಈ) ವಿಶೇಷವಾಗಿ ಮಂಡ್ಯ ಜಿಲ್ಲೆ ಮದ್ದೂರು ತಾಲ್ಲೂಕು ಕೊಪ್ಪ ಪಶು ಆಸ್ಪತ್ರೆ ಕಟ್ಟಡ ನಿರ್ಮಾಣಕ್ಕೆ ಮಂಜೂರಾಗಿರುವ ಹಣ ಎಷ್ಟು ;

(ಉ) ಸದರಿ ಕಾಮಗಾರಿಯನ್ನು ಪ್ರಾರಂಭಿಸುವುದು ಯಾವಾಗ ; ಯಾವ ಕಾಲಮಿತಿಯೊಳಗೆ ಮುಕ್ತಾಯಗೊಳ್ಳಲಿದೆ ?

## "ಕೃಷಿ ಭಾಗ್ಯ" ಯೋಜನೆಗಳ ಅನುಷ್ಠಾನದಲ್ಲಿ ನಡೆದಿರುವ ಅಕ್ರಮಗಳ ಬಗ್ಗೆ

**ಶ್ರೀ ಕೆ.ಟಿ. ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ) :–**

೬೯ (೧೪) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೃಷಿ ಇಲಾಖೆಯಿಂದ "ಕೃಷಿ ಭಾಗ್ಯ" ಯೋಜನೆಯಲ್ಲಿ ರೈತರಿಗೆ ನೀಡುತ್ತಿರುವ ಯೋಜನೆಗಳು ಯಾವುವು ;

(ಆ) ಈ ಯೋಜನೆಗಳಲ್ಲಿ ರೈತರಿಗೆ ಸೇರಬೇಕಾದ ಸಬ್ಸಿಡಿ ಹಣವನ್ನು ಭ್ರಷ್ಟ ಅಧಿಕಾರಿಗಳು ದುರುಪಯೋಗ ಪಡಿಸಿಕೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಮುಖ್ಯವಾಗಿ ತುಮಕೂರು ಮತ್ತು ಮಂಡ್ಯ ಜಿಲ್ಲೆಗಳಲ್ಲಿ "ಕೃಷಿ ಭಾಗ್ಯ" ಯೋಜನೆಗಳಲ್ಲಿ ನಾನಾ ರೀತಿಯ ವಂಚನೆಗಳು ನಡೆದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರ ತಪ್ಪಿತಸ್ಥರ ವಿರುದ್ಧ ಕೈಗೊಂಡಿರುವ ಕ್ರಮಗಳೇನು ?

## ಪಾಲಿಹೌಸ್ ನಿರ್ಮಾಣಕ್ಕೆ ನಿಗಧಿಪಡಿಸಿರುವ ಮಾನದಂಡಗಳ ಕುರಿತು

**ಶ್ರೀಮತಿ ಎಸ್. ವೀಣಾ ಅಚ್ಚಯ್ಯ (ವಿಧಾನಸಭೆಯಿಂದ ಚುನಾಯಿತರಾದವರು):–**

೭೦ (೩೩) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಪಾಲಿಹೌಸ್ ನಿರ್ಮಾಣಕ್ಕೆ ಇಲಾಖೆ ನಿಗಧಿಪಡಿಸಿರುವ ನಿಯಮ ಹಾಗೂ ಮಾನದಂಡಗಳೇನು : (ಸಂಪೂರ್ಣ ವಿವರ ನೀಡುವುದು)

(ಆ) ಕಳೆದ ೫ ವರ್ಷಗಳಲ್ಲಿ ರಾಜ್ಯದಲ್ಲಿ ನಿರ್ಮಾಣವಾಗಿರುವ ಪಾಲಿಹೌಸ್‌ಗಳ ಸಂಖ್ಯೆ ಎಷ್ಟು ; ಹಾಗೂ ವಿನಿಯೋಗಿಸಿರುವ ಅನುದಾನವೆಷ್ಟು ; (ವರ್ಷಾವಾರು, ತಾಲ್ಲೂಕುವಾರು ಸಂಪೂರ್ಣ ವಿವರ ನೀಡುವುದು)

(ಇ) ಪಾಲಿಹೌಸ್‌ಗಳ ನಿರ್ಮಾಣದಲ್ಲಿ ಗುಣಮಟ್ಟ ಕಾಪಾಡಲು ಇಲಾಖೆ ಕೈಗೊಂಡಿರುವ ಕ್ರಮಗಳೇನು ? (ವಿವರ ನೀಡುವುದು)

## ಫಲಾನುಭವಿಗಳಿಗೆ ಸಿಗುತ್ತಿರುವ ವೈಯಕ್ತಿಕ ಸೌಲಭ್ಯಗಳ ಕುರಿತು

**ಶ್ರೀಮತಿ ಎಸ್. ವೀಣಾ ಅಚ್ಚಯ್ಯ (ವಿಧಾನಸಭೆಯಿಂದ ಚುನಾಯಿತರಾದವರು):–**

೭೧ (೧೮) ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಪಶುಸಂಗೋಪನೆ ಇಲಾಖೆಯಿಂದ ವೈಯಕ್ತಿಕ ಫಲಾನುಭವಿಗಳಿಗೆ ಸಿಗುತ್ತಿರುವ ಸೌಲಭ್ಯಗಳು ಯಾವುವು ; (ಪ್ರಸ್ತುತ ಚಾಲ್ತಿಯಲ್ಲಿರುವ ಯೋಜನೆ, ಕಾರ್ಯಕ್ರಮ ಸಾಲ, ಸಹಾಯಧನ ಸೇರಿದಂತೆ ಎಲ್ಲಾ ಸೌಲಭ್ಯಗಳ ಸಂಪೂರ್ಣ ವಿವರ ನೀಡುವುದು)

(ಆ) ೨೦೧೩-೧೪ನೇ ಸಾಲಿನಿಂದ ಇಲ್ಲಿಯವರೆಗೆ ಈ ಸೌಲಭ್ಯಗಳನ್ನು ಪಡೆದ ಫಲಾನುಭವಿಗಳೆಷ್ಟು ಹಾಗೂ ವಿನಿಯೋಗಿಸಿದ ಅನುದಾನವೆಷ್ಟು ? (ವರ್ಷಾವಾರು, ಸೌಲಭ್ಯವಾರು ವಿವರಗಳನ್ನು ತಾಲ್ಲೂಕುವಾರು ನೀಡುವುದು)

## ರೇಷ್ಮೆ ಇಲಾಖೆಯಿಂದ ರೈತರಿಗೆ ಸಿಗುತ್ತಿರುವ ಸೌಲಭ್ಯಗಳ ಕುರಿತು

**ಶ್ರೀಮತಿ ಎಸ್. ವೀಣಾ ಅಚ್ಚಯ್ಯ (ವಿಧಾನಸಭೆಯಿಂದ ಚುನಾಯಿತರಾದವರು):–**

೭೨ (೩೨) ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ರೇಷ್ಮೆ ಬೆಳೆಗಾರರಿಗೆ ಸರ್ಕಾರದಿಂದ ದೊರೆಯುತ್ತಿರುವ ಸೌಲಭ್ಯಗಳು ಯಾವುವು ; ಸದರಿ ಸೌಲಭ್ಯಗಳನ್ನು ಪಡೆಯಲು ನಿಗಧಿಪಡಿಸಿರುವ ಮಾನದಂಡಗಳೇನು ; (ಸಂಪೂರ್ಣ ವಿವರ ನೀಡುವುದು)

(ಆ) ಕಳೆದ ೫ ವರ್ಷಗಳಲ್ಲಿ ಈ ಸೌಲಭ್ಯಗಳನ್ನು ಪಡೆದ ರೈತರ ಸಂಖ್ಯೆ ಎಷ್ಟು ಹಾಗೂ ವಿನಿಯೋಗಿಸಿದ ಅನುದಾನವೆಷ್ಟು ? (ಪ್ರತಿ ಸೌಲಭ್ಯದ ಫಲಾನುಭವಿಗಳ ಸಂಖ್ಯೆ ಹಾಗೂ ವಿನಿಯೋಗಿಸಿದ ಅನುದಾನದ ಮೊತ್ತವನ್ನು ವರ್ಷವಾರು ಹಾಗೂ ತಾಲ್ಲೂಕುವಾರು ವಿವರ ನೀಡುವುದು)

## ಅಡಿಕೆ ಬೆಳೆಗಾರರ ಮಂಡಳಿ ರಚನೆ ಮತ್ತು ಗೇರು ಕೃಷಿ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು) :–**

೭೩ (೮೫) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಅಡಿಕೆ ಬೆಳೆಗಾರರ ರಕ್ಷಣೆಗಾಗಿ ಅಡಿಕೆ ಬೆಳೆಗಾರರ ಮಂಡಳಿ ರಚನೆಗೆ ಕೃಷಿ ವಿಶ್ವವಿದ್ಯಾನಿಲಯ ಮನವಿ ಸಲ್ಲಿಸಿದರೂ ಮಂಡಳಿ ರಚನೆ ಮಾಡದೇ ಇರಲು ಕಾರಣವೇನು ;

(ಆ) ಸರ್ಕಾರ ನೇಮಿಸಿದ ತಜ್ಞರ ವರದಿಯನ್ನು ನೀಡುವುದು ; ವರದಿ ಅನುಷ್ಠಾನಗೊಳಿಸಲು ಕೈಗೊಂಡಿರುವ ಕ್ರಮಗಳ ಜಿಲ್ಲಾವಾರು ವಿವರ ನೀಡುವುದು ;

(ಇ) ರಾಜ್ಯದಲ್ಲಿ ತೋಟಗಾರಿಕಾ ಇಲಾಖೆಯಿಂದ ಎಷ್ಟು ಹೆಕ್ಟೇರು ಗೇರು ಕೃಷಿ ಬೆಳೆಸಲಾಗುತ್ತಿದೆ ; ಗೇರು ಕೃಷಿಯನ್ನು ಪ್ರೋತ್ಸಾಹಿಸಲು ಇಲಾಖೆ ಕೈಗೊಂಡ ಕ್ರಮಗಳೇನು ; (ವಿವರ ನೀಡುವುದು)

(ಈ) ಕಳೆದ ಸಾಲಿನ ಆಯವ್ಯಯದಲ್ಲಿ ಗೇರು ಕೃಷಿ ಉತ್ಪಾದನೆಗೆ ಮೀಸಲಿಟ್ಟ ಹಣವನ್ನು ಯಾವ ಯಾವ ಉದ್ದೇಶಗಳಿಗಾಗಿ ಬಳಸಲಾಗಿದೆ ; (ವಿವರ ನೀಡುವುದು)

(ಉ) ರಾಜ್ಯದಲ್ಲಿ ಒಟ್ಟು ಎಷ್ಟು ಗೇರು ಉತ್ಪಾದಿಸಲಾಗಿದೆ ? (ವಿವರ ಒದಗಿಸುವುದು)

## ಛತ್ತೀಸ್‌ಘಡ್‌ದಲ್ಲಿ ಸ್ಥಾಪಿಸಬಹುದಾದ ಇಂಧನ ಉತ್ಪಾದನೆಯ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು) :–**

೭೪ (೮೩) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯ ಸರ್ಕಾರವು ಛತ್ತೀಸ್‌ಘಡ್‌ದಲ್ಲಿ ಸ್ಥಾಪಿಸಬಹುದಾದ ಇಂಧನದ ಉತ್ಪಾದನಾ ಘಟಕವು ಯಾವ ಹಂತದಲ್ಲಿದೆ ; (ವಿವರ ಒದಗಿಸುವುದು)

(ಆ) ರಾಜ್ಯ ಸರ್ಕಾರ ಈ ಯೋಜನೆಗೆ ಮೀಸಲಿಟ್ಟ ಹಣವೆಷ್ಟು ; ಈ ಘಟಕದಿಂದ ಎಷ್ಟು ವಿದ್ಯುತ್ ಉತ್ಪಾದನೆಯಾಗುತ್ತಿದೆ ; (ವಿವರ ಒದಗಿಸುವುದು)

(ಇ) ರಾಜ್ಯದಲ್ಲಿ ಎಲ್ಲಾ ಮೂಲಗಳಿಂದ ಉತ್ಪಾದಿಸುವ ಒಟ್ಟು ವಿದ್ಯುತ್ ಎಷ್ಟು ; ೨೦೧೫-೧೬, ೨೦೧೬-೧೭ ಮತ್ತು ೨೦೧೭-೨೦೧೮ನೇ ಸಾಲುಗಳಲ್ಲಿ ಒಟ್ಟು ಉತ್ಪಾದಿಸಿದ ವಿದ್ಯುತ್ ಪ್ರಮಾಣ ಎಷ್ಟು ; ಬೇಡಿಕೆ ಎಷ್ಟು ; (ವಿವರ ಒದಗಿಸುವುದು)

(ಈ) ರಾಜ್ಯದಲ್ಲಿ ಭಾಗ್ಯ ಜ್ಯೋತಿಯಡಿಯಲ್ಲಿ ಎಷ್ಟು ಫಲಾನುಭವಿಗಳು ಉಚಿತ ವಿದ್ಯುತ್ ಸೌಕರ್ಯವನ್ನು ಪಡೆಯುತ್ತಿದ್ದಾರೆ ? (ಜಿಲ್ಲಾವಾರು ವಿವರ ನೀಡುವುದು)

## ಶಿರಾಡಿಘಾಟ್ ರಸ್ತೆ ಕಾಮಗಾರಿ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು) :-**

೭೫ (೮೪) ಮಾನ್ಯ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಶಿರಾಡಿಘಾಟ್ ಕಾಮಗಾರಿಯು ಯಾವ ಕಾಲಮಿತಿಯೊಳಗೆ ಪೂರ್ಣಗೊಳ್ಳುವುದು ; ಗುತ್ತಿಗೆದಾರರಿಗೆ ನೀಡಿದ ಅವಧಿ ಎಷ್ಟು; ಅಂದಾಜು ವೆಚ್ಚ ಎಷ್ಟು ; (ವಿವರ ಒದಗಿಸುವುದು)

(ಆ) ಶಿರಾಡಿಘಾಟ್ ಬದಲಿ ರಸ್ತೆಯನ್ನು ನಿರ್ಮಿಸದೇ ಶಿರಾಡಿಘಾಟ್ ರಸ್ತೆಯನ್ನು ಸಂಪೂರ್ಣ ಬಂದ್ ಮಾಡಿರುವುದರಿಂದ ಪ್ರಯಾಣಿಕರಿಗೆ ಆಗುವ ತೊಂದರೆ ಇಲಾಖೆಯ ಗಮನಕ್ಕೆ ಬಂದಿದೆಯೇ ; (ಪರ್ಯಾಯ ರಸ್ತೆಯ ವಿವರ ಒದಗಿಸುವುದು)

(ಇ) ಶಿರಾಡಿಘಾಟ್‌ಗೆ ಸಮಾನಾಂತರವಾಗಿ ಸುರಂಗಮಾರ್ಗ ರಚನೆ ಪ್ರಸ್ತಾವನೆಯು ಯಾವ ಹಂತದಲ್ಲಿದೆ ; (ವಿವರ ಒದಗಿಸುವುದು)

(ಈ) ಶಿರಾಡಿ ಘಾಟ್ ಒಟ್ಟು ಉದ್ದ ಎಷ್ಟು ; ೨ನೇ ಹಂತದ ಕಾಮಗಾರಿ ಮುಗಿದ ನಂತರ ೩ನೇ ಹಂತದ ಕಾಮಗಾರಿ ಇದೆಯೇ ; (ವಿವರ ನೀಡುವುದು)

(ಉ) ರಾಜ್ಯದಲ್ಲಿ ೨೦೧೫-೧೬ ಮತ್ತು ೨೦೧೬-೧೭ರಲ್ಲಿ ಲೋಕೋಪಯೋಗಿ ಇಲಾಖೆಯಿಂದ ಎಷ್ಟು ಕಿ.ಮೀ. ರಸ್ತೆಯನ್ನು ನಿರ್ಮಿಸಲಾಗಿದೆ ; ರಾಜ್ಯ ಹಾಗೂ ಕೇಂದ್ರ ಸರ್ಕಾರದ ಖರ್ಚು ಎಷ್ಟು ; (ವಿವರ ಒದಗಿಸುವುದು)

(ಊ) ೨೦೧೬-೧೭ನೇ ಸಾಲಿನಲ್ಲಿ ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಲೋಕೋಪಯೋಗಿ ಇಲಾಖೆಯಿಂದ ಕೈಗೊಂಡಿರುವ ಕಾಮಗಾರಿಗಳು ಯಾವುವು ? (ವಿವರ ಒದಗಿಸುವುದು)

## ರಾಜ್ಯದಲ್ಲಿ ಉತ್ಪಾದನೆಯಾಗುತ್ತಿರುವ ಹಾಲಿನ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು) :–**

೭೬ (೮೭) ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಉತ್ಪಾದನೆಯಾಗುತ್ತಿರುವ ಒಟ್ಟು ಹಾಲು ಎಷ್ಟು ; (ಜಿಲ್ಲಾವಾರು ವಿವರ ಒದಗಿಸುವುದು) ೨೦೧೫-೧೬, ೨೦೧೬-೧೭ ರಲ್ಲಿ ಉತ್ಪಾದನೆಯಾದ ಒಟ್ಟು ಹಾಲಿನ ಪ್ರಮಾಣ ಎಷ್ಟು ; ಬೇಡಿಕೆ ಎಷ್ಟು ;

(ಆ) ಹಾಲಿನ ಪುಡಿಯನ್ನು ತಯಾರಿಸಲು ಲೀಟರ್ ಒಂದರ ಮೇಲೆ ಎಷ್ಟು ಖರ್ಚು ತಗಲುವುದು ; ಉತ್ಪಾದಿಸುವ ಒಟ್ಟು ಹಾಲಿನ ಪುಡಿ ಎಷ್ಟು ; (ವಿವರ ಒದಗಿಸುವುದು)

(ಇ) ರಾಜ್ಯದಲ್ಲಿ ಎಷ್ಟು ಹಾಲು ಸಂಗ್ರಹಣೆ ಸರಬರಾಜು ಮಾಡುವ ಘಟಕಗಳಿವೆ ; ನಕಲಿ ಹಾಲು ಉತ್ಪಾದನೆಯನ್ನು ಕಂಡು ಹಿಡಿಯಲು ಇಲಾಖೆ ಕೈಗೊಂಡ ಕ್ರಮಗಳೇನು ;

(ಈ) ರಾಜ್ಯದಲ್ಲಿ ನಕಲಿ ಹಾಲು ಮಾರಾಟದ ಬಗ್ಗೆ ಇಲಾಖೆಯ ಗಮನಕ್ಕೆ ಬಂದಿದೆಯೇ ; ಬಂದಿದ್ದರೆ ಇಲಾಖೆ ಕೈಗೊಂಡ ಕ್ರಮಗಳೇನು ?

## ದಕ್ಷಿಣ ಕನ್ನಡ ಜಿಲ್ಲೆಯ ದೇವಸ್ಥಾನಗಳಿಗೆ ಧಾರ್ಮಿಕ ದತ್ತಿ ಇಲಾಖೆಯ ಅನುದಾನದ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು) :–**

೭೭ (೮೬) ಮಾನ್ಯ ಜವಳಿ ಹಾಗೂ ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಎಷ್ಟು ದೇವಸ್ಥಾನಗಳಿಗೆ ಧಾರ್ಮಿಕ ದತ್ತಿ ಇಲಾಖೆಯಡಿಯಲ್ಲಿ ಆಡಳಿತ ಮಂಡಳಿ ರಚಿಸಲಾಗಿದೆ ; ಆಡಳಿತ ಮಂಡಳಿ ರಚನೆ ಬಾಕಿ ಇರುವ ದೇವಸ್ಥಾನಗಳು ಯಾವುವು ; (ವಿವರ ಒದಗಿಸುವುದು)

(ಆ) ದಕ್ಷಿಣ ಕನ್ನಡ ಜಿಲ್ಲೆಯ ಧಾರ್ಮಿಕ ದತ್ತಿ ಇಲಾಖಾವತಿಯಿಂದ ಮಂಜೂರಾದ ಒಟ್ಟು ಅನುದಾನವೆಷ್ಟು ; ಯಾವ ಯಾವ ದೇವಸ್ಥಾನಗಳಿಗೆ ಅನುದಾನ ನೀಡಲಾಗಿದೆ ? (ವಿವರ ನೀಡುವುದು)

## ಮಾಲಿಂಗಿ–ತಲಕಾಡು ಮಧ್ಯ ಕಾವೇರಿ ಸೇತುವೆ ನಿರ್ಮಾಣದ ಬಗ್ಗೆ

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೭೮ (೪೭) ಮಾನ್ಯ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮೈಸೂರು ಜಿಲ್ಲೆ, ತಿ.ನರಸಿಪುರ ತಾಲ್ಲೂಕು ತಲಕಾಡು ಮತ್ತು ಮಾಲಿಂಗಿ ನಡುವೆ ಕಾವೇರಿ ನದಿಗೆ ಸೇತುವೆ ನಿರ್ಮಿಸಲು ಕೈಗೊಂಡಿರುವ ಕ್ರಮಗಳೇನು ; ಯೋಜನೆಯ ವಿವರಗಳನ್ನು ನೀಡುವುದು ;

(ಆ) ತಡಿ ಮಾಲಿಂಗಿ ಗ್ರಾಮವನ್ನು ಪ್ರವಾಹದಿಂದ ರಕ್ಷಿಸಲು ತಡೆಗೋಡೆ ನಿರ್ಮಿಸಲು ಕ್ರಮ ತೆಗೆದುಕೊಳ್ಳಲಾಗುವುದೇ ; ಈ ಬಗ್ಗೆ ಕೈಗೊಂಡಿರುವ ಕ್ರಮಗಳೇನು ; ಯೋಜನೆಯ ವಿವರಗಳನ್ನು ನೀಡುವುದು ;

(ಇ) ರಾಷ್ಟ್ರೀಯ ಹೆದ್ದಾರಿ ೭೯ ರಿಂದ ತಡಿ ಮಾಲಿಂಗಿ ಗ್ರಾಮಕ್ಕೆ ಸಂಪರ್ಕ ಕಲ್ಪಿಸುವ ರಸ್ತೆ ನಿರ್ಮಾಣ ಕಾರ್ಯ ಆರಂಭವಾಗಿದೆಯೇ ? (ವಿವರಗಳನ್ನು ನೀಡುವುದು)

## ಬಿಳಿಗಿರಿ ರಂಗನ ಬೆಟ್ಟದ ದೇವಾಲಯದ ಅಭಿವೃದ್ಧಿ ಕಾಮಗಾರಿಗಳ ಬಗ್ಗೆ

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೭೯ (೪೮) ಮಾನ್ಯ ಜವಳಿ ಹಾಗೂ ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬಿಳಿಗಿರಿ ರಂಗನ ಬೆಟ್ಟ ದೇವಾಲಯದ ಜೀರ್ಣೋದ್ಧಾರ ಕಾರ್ಯ ಯಾವ ಹಂತದಲ್ಲಿದೆ ; ಮುಖ್ಯ ದೇವಾಲಯ ಮತ್ತು ಅಮ್ಮನವರ ದೇವಾಲಯ ನಿರ್ಮಾಣ ಕಾರ್ಯ ತೇರಿನ ನಿರ್ಮಾಣ ಕಾಮಗಾರಿಗಳು ಮುಕ್ತಾಯವಾಗಿವೆಯೇ ; ಇನ್ನೂ ಯಾವ ಕಾಮಗಾರಿಗಳು ಬಾಕಿ ಇವೆ ; (ವಿವರ ಒದಗಿಸುವುದು)

(ಆ) ರಾಜಗೋಪುರದ ಮೆಟ್ಟಿಲುಗಳ ನಿರ್ಮಾಣ ಕಾರ್ಯ, ರಥದ ಬೀದಿಯ ಇಕ್ಕೆಲಗಳಲ್ಲಿರುವ ಮಂಟಪಗಳ ಪುನರ್ ನಿರ್ಮಾಣ ಕಾರ್ಯ ದೇವಾಲಯದ ಬಳಿ ಕುಡಿಯುವ ನೀರಿನ ಸೌಲಭ್ಯಕ್ಕಾಗಿ ಓವರ್‌ಹೆಡ್ ಟ್ಯಾಂಕ್ ನಿರ್ಮಾಣ ಮೊದಲಾದ ಕಾಮಗಾರಿಗಳು ಯಾವ ಹಂತದಲ್ಲಿವೆ ; (ವಿವರ ಒದಗಿಸುವುದು)

(ಇ) ಈ ಎಲ್ಲ ಕಾಮಗಾರಿಗಳಿಗೆ ಒದಗಿಸಿರುವ ಹಣ ಹಾಗೂ ಖರ್ಚಾಗಿರುವ ಹಣ ಎಷ್ಟು ; ಇನ್ನೂ ಅಗತ್ಯವಿರುವ ಅಂದಾಜು ವೆಚ್ಚ ಎಷ್ಟು ? (ವಿವರ ಒದಗಿಸುವುದು)

## ಚಾಮರಾಜನಗರ ಜಿಲ್ಲೆಯಲ್ಲಿ ಹಳೆಯ ವಿದ್ಯುತ್ ಕಂಬಗಳನ್ನು ಬದಲಾಯಿಸುವ ಬಗ್ಗೆ

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೮೦ (೪೬) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಚಾಮರಾಜನಗರ ಜಿಲ್ಲೆಯಲ್ಲಿ ಕಳೆದ ಎರಡು ವರ್ಷದಲ್ಲಿ ವಿದ್ಯುತ್ ತಂತಿ ಕಡಿದು ಬಿದ್ದು, ಆಗಿರುವ ಬೆಳೆ ಹಾನಿ, ಮಾನವ ಮತ್ತು ಪಶು ಜೀವ ಹಾನಿ ಪ್ರಕರಣಗಳು ಎಷ್ಟು ; ಎಷ್ಟು ಮೌಲ್ಯದ ಬೆಳೆ ನಾಶವಾಗಿದೆ ; ಈ ಪ್ರಕರಣಗಳಲ್ಲಿ ಪರಿಹಾರ ನೀಡಲಾಗಿದೆಯೇ ;

(ಆ) ಜಿಲ್ಲೆಯಲ್ಲಿ ಹಳೆಯದಾಗಿ ತುಕ್ಕು ಹಿಡಿದಿರುವ ಕಬ್ಬಿಣ ಮತ್ತು ಪೊಳ್ಳಾಗುತ್ತಿರುವ ಮರದ ವಿದ್ಯುತ್ ಕಂಬಗಳನ್ನು ಬದಲಾಯಿಸಲು ಸೂಕ್ತ ಕ್ರಮ ತೆಗೆದುಕೊಳ್ಳಲಾಗಿದೆಯೇ ; ಈ ಬಗ್ಗೆ ಈಚೆಗೆ ನಡೆದ ಜಿಲ್ಲಾ ಪಂಚಾಯತ್ ಸಭೆಯಲ್ಲಿ ಚರ್ಚೆಯಾಗಿ ಸೆಸ್ಕ್ ಅಧಿಕಾರಿಗಳಿಗೆ ಸೂಚನೆ ನೀಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ?

**ಕೆ.ಆರ್. ಮಹಾಲಕ್ಷ್ಮಿ**
ಕಾರ್ಯದರ್ಶಿ (ಪ್ರ)
ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು–59/ಕಾ.ಸೂ. 0269/800 ಪ್ರತಿಗಳು/02–02–2018